ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 263 RNI Number : KNKAN/25/A2770 06-10-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:263 ರಾಯಚೂರು 06-10-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಮುಂಬರುವ ಎಲ್ಲಾ ಚುನಾವಣೆಗಳನ್ನು ಬಿಜೆಪಿ - ಜೆಡಿಎಸ್ ಮೈತ್ರಿಯಾಗಿ ಎದುರಿಸಲಿವೆ: ಯಡಿಯೂರಪ್ಪ

ಕಲಬುರಗಿ,ಆ.05–

ಮುಂಬರುವ ಎಲ್ಲಾ ಚುನಾವಣೆಗಳನ್ನು ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾಗಿ ಎದುರಿಸಲಿವೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಶೀಲ್ ನಮೋಶಿ ನಾಮಪತ್ರ ಸಲ್ಲಿಕೆ ಹಿನ್ನೆಲೆಯಲ್ಲಿ ಕಲಬುರಗಿಗೆ ಆಗಮಿಸಿದ ಅವರು, ಮಾಧ್ಯಮದವರೊಂದಿಗೆ ಮಾತನಾಡಿ ಬಿಜೆಪಿ - ಜೆಡಿಎಸ್ ಮೈತ್ರಿಯಿಂದ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದರು.



ರಾಜ್ಯದಲ್ಲಿ ಹಲವಾರು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಶಿಕ್ಷಕರು ಹಾಗೂ ಅಧ್ಯಾಪಕರಿಗೆ ಸಂಬಳ ಸರಿಯಾಗಿ ಬರುತ್ತಿಲ್ಲ. ಮಕ್ಕಳ ಶೂ ಮತ್ತು ಸಾಕ್ಸ್ ಖರೀದಿಯಲ್ಲೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದರು.

ರೈತರಿಗೆ 2,500 ರೂಪಾಯಿ ನೀಡುವುದಾಗಿ ಭರವಸೆ ನೀಡಲಾಗಿದ್ದರೂ ಇನ್ನೂ ಹಣ ನೀಡಿಲ್ಲ ಎಂದು ಆರೋಪಿಸಿದ ಯಡಿಯೂರಪ್ಪ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಣದ ಬಲ ಹಾಗೂ ಜಾತಿ ರಾಜಕಾರಣದ ಮೂಲಕ ಚುನಾವಣೆ ಗೆಲ್ಲಲು ಮುಂದಾಗಿದ್ದಾರೆ. ಹೀಗಾಗಿ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಶಶೀಲ್ ನಮೋಶಿ ಅವರನ್ನು ಗೆಲ್ಲಿಸುವ ಮೂಲಕ ಸೂಕ್ತ ಉತ್ತರ ನೀಡಬೇಕು ಎಂದು ಯಡಿಯೂರಪ್ಪ ಮನವಿ ಮಾಡಿದರು.

ಇದೇ ವೇಳೆ, ದೇಶದ ಹೆಮ್ಮೆಯ ಫೈಲಟ್ ಸ್ಮಿತ್ ಅವರಿಗೆ ಭಾರತ ರತ್ನ ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡುವುದಾಗಿ ಯಡಿಯೂರಪ್ಪ ಹೇಳಿದರು. ಮಾಜಿ ಸಚಿವ ಬಂಡೆಪ್ಪ ಕಾಶಂಪುರ ಮಾಜಿ ಸಚಿವ ವೆಂಕಟ ರಾವ್ ನಾಡಗೌಡ, ಶಾಸಕ ಎನ್. ರವಿಕುಮಾರ್, ಶೈಲೇಂದ್ರ ಬೆಲ್ದಾಳೆ ಸೇರಿದಂತೆ ಅನೇಕ ನಾಯಕರು ಡಿಸಿ ಕಚೇರಿಗೆ ಆಗಮಿಸಿ ಚುನಾವಣಾ ಅಧಿಕಾರಿ ಜಹಿರಾ ನಸೀಮ್ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಇನ್ನೂ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಸಹ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಲಬುರಗಿಯ ಸಂಸದ ರಾಧಾಕೃಷ್ಣ ದೊಡ್ಡಮನಿ, ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಶಾಸಕರುಗಳಾದ ತಿಪ್ಪಣ್ಣಪ್ಪ ಕಮಕನೂರು, ಅಲ್ಲಮ ಪ್ರಭು ಪಾಟೀಲ್ ಸೇರದಂತೆ ಅನೇಕ ನಾಯಕರು ಉಪಸ್ಥಿತರಿದ್ದರು.

ರಾತ್ರಿಯೂ ಬೆಳೆ ಹಾನಿ ಸಮೀಕ್ಷೆ ನಡೆಸಿದ ಕೇಂದ್ರ ಬರ ಅಧ್ಯಯನ ತಂಡ

ರಾಯಚೂರು: ಜಿಲ್ಲೆಯಲ್ಲಿ ತೀವ್ರ ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿಯನ್ನು ಪರಿಶೀಲಿಸಲು ಆಗಮಿಸಿರುವ ಕೇಂದ್ರ ಬರ ಅಧ್ಯಯನ ತಂಡವು ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಬರ ಅಧ್ಯಯನ ನಡೆಸಿತು.

ದೇವದುರ್ಗ, ಲಿಂಗಸೂಗೂರು ಹಾಗೂ ಮಸ್ಕಿ ತಾಲೂಕುಗಳಲ್ಲಿ ತಂಡವು ವಿವಿಧ ಬೆಳೆಗಳ ಪರಿಸ್ಥಿತಿಯನ್ನು ಪರಿಶೀಲಿಸಿತು. ದೇವದುರ್ಗ ತಾಲೂಕು ಪಂಚಾಯತ್ ಕಚೇರಿಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜಿಲ್ಲೆಯಲ್ಲಿ ಮಳೆ ಕೊರತೆ, ಬೆಳೆ ಹಾನಿ ಹಾಗೂ ಬರ ಪರಿಸ್ಥಿತಿಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿತು.

ನಂತರ ತಂಡವು ಮೆಣಸಿನಕಾಯಿ, ಹತ್ತಿ ಹಾಗೂ ತೊಗರಿ ಸೇರಿದಂತೆ ವಿವಿಧ ಬೆಳೆಗಳ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು. ಮಸ್ಕಿ ತಾಲೂಕಿನ ಅಮೀನಗಢ ಗ್ರಾಮದಲ್ಲಿಯೂ ತೊಗರಿ ಬೆಳೆ ವೀಕ್ಷಿಸಿ ರೈತರಿಂದ ನೇರವಾಗಿ ಮಾಹಿತಿ ಪಡೆಯಿತು.

ಮಳೆ ಕೊರತೆಯಿಂದ ಈರುಳ್ಳಿ, ಹತ್ತಿ ಹಾಗೂ ತೊಗರಿ ಬೆಳೆಗಳಿಗೆ ಹಾನಿಯಾಗಿದ್ದು, ಇಳುವರಿ ಕುಸಿದಿರುವ ಬಗ್ಗೆ ರೈತರು ಕೇಂದ್ರ ತಂಡಕ್ಕೆ ವಿವರಿಸಿದರು. ಕೆಲವು ಜಮೀನುಗಳಲ್ಲಿ ರಾತ್ರಿ ಸಮಯವಾದರೂ ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಬೆಳೆಗಳನ್ನು ಪರಿಶೀಲಿಸಿದ ತಂಡ, ರೈತರ ಸಮಸ್ಯೆಗಳನ್ನು ಆಲಿಸಿತು.

ರಾತ್ರಿಯಾದರೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ವಿವಿಧೆಡೆ ಬೆಳೆ ವೀಕ್ಷಣೆ ನಡೆಸಿದ ಕೇಂದ್ರ ಬರ ಅಧ್ಯಯನ ತಂಡವು ಬರ ಪರಿಸ್ಥಿತಿಯ ವಾಸ್ತವಾಂಶವನ್ನು ದಾಖಲಿಸಿಕೊಂಡಿತು.

ಇದಕ್ಕೂ ಮುನ್ನ ಪಾಟ್ನಾದ ಭತ್ತ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಡಾ. ಮಾನಸಿಂಗ್ ಅವರ ನೇತೃತ್ವದ ತಂಡ ದೇವದುರ್ಗ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಬರ

3ನೇ ಪುಟ.....

ಮಸ್ಕಿ ರೈತ ಸಂಪರ್ಕ ಕೇಂದ್ರದಲ್ಲಿ ಕಡಲೆ ಬೀಜ ವಿತರಣೆ

ಮಸ್ಕಿ, ಅ. 5–

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ಹಿಂಗಾರು ಹಂಗಾಮಿನ ಕಡಲೆ ಬೀಜ ವಿತರಿಸಲಾಯಿತು.

ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವೈ ಬಿ ಕ್ಷತ್ರಿ ಮಾತನಾಡಿ, ಮಸ್ಕಿ ಹೋಬಳಿಯಲ್ಲಿ 64 ಗ್ರಾಮಗಳಿದ್ದು, ಮುಂಗಾರಿನಲ್ಲಿ ಶೇ 50ರಷ್ಟು ಸೂರ್ಯಕಾಂತಿ, ತೊಗರಿ ಸೇರಿದಂತೆ ಇತರೆ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ. ಹಿಂಗಾರು ಬಿತ್ತನೆಗೆ 5000 ರಷ್ಟು ಹೆಕ್ಟರ್ ಭೂಮಿ ಖಾಲಿಯಿದ್ದು,800 ಕ್ವಿಂಟಲ್ ಕಡಲೆ ಬೀಜ ನೀಡುವಂತೆ ನಿಗಮಕ್ಕೆ ಬೇಡಿಕೆ ಸಲ್ಲಿಸಿವೆ. ಈಗ ಕೇಂದ್ರಕ್ಕೆ300 ಕ್ವಿಂಟಲ್ ಕಡಲೆ ಬೀಜ ಬಂದಿದೆ ಎಂದರು.



ರೈತರ ಬೇಡಿಕೆ ಅನುಗುಣವಾಗಿ ಕಡಲೆ ಬೀಜ ಬರಲಿದೆ. ಪರಿಶಿಷ್ಟ ಜಾತಿ ರೈತರಿಗೆ ಕ್ವಿಂಟಲ್‌ಗೆ ರೂ. 5,250 ಹಾಗೂ ಸಾಮಾನ್ಯ ರೈತರಿಗೆ ರೂ. 6,500 ದರ ನಿಗದಿಪಡಿಸಲಾಗಿದೆ.

ರೈತರು ಪಹಣಿ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರದ ದಾಖಲೆಗಳನ್ನು ನೀಡಿ ಕಡಲೆ ಬೀಜ ಪಡೆಯಬೇಕು ಎಂದರು.


ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವೈ ಭಿ ಕ್ಷತ್ರಿ,ಕೆ.ರಾ.ರ. ಸಂಘ ಹಾಗೂ ಹಸಿರು ಸೇನೆ

3ನೇ ಪುಟ.....

ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಕಾಂಗ್ರೆಸ್ ಸರ್ಕಾರದಿಂದ ನಿರ್ಲಕ್ಷ್ಯ : ರಘು ಆರೋಪ

ರಾಯಚೂರು, ಅ. 5– ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಹಿಂದುಳಿದ ಸಮುದಾಯಗಳ ಕಲ್ಯಾಣ ಮತ್ತು ಅಭಿವೃದ್ಧಿಗೆ ಯಾವುದೇ ಪರಿಣಾಮಕಾರಿ ಯೋಜನೆಗಳನ್ನು ಜಾರಿಗೊಳಿಸದೆ ನಿರ್ಲಕ್ಷ್ಯ ವಹಿಸಿದೆ ಎಂದು ಬಿಜೆಪಿ ಒಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ರಘು ಕೌಟಿಲ್ಯ ಆರೋಪಿಸಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಹಿಂದುಳಿದ ಸಮುದಾಯಗಳ ಬೆಳವಣಿಗೆಯನ್ನು ಕಡೆಗಣಿಸಲಾಗುತ್ತಿದೆ. ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಗೆ ಸಮರ್ಪಕ ಅನುದಾನ ನೀಡುತ್ತಿಲ್ಲ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಲ, ರೈತರಿಗೆ ಗಂಗಾ ಕಲ್ಯಾಣ ಯೋಜನೆ ಸಮರ್ಪಕವಾಗಿ ತಲುಪುತ್ತಿಲ್ಲ. ಸಾಂಪ್ರದಾಯಿಕ ಕಸುಬುದಾರರಿಗೆ ವಿಶೇಷ ಅನುದಾನ ನೀಡುವ ಮೂಲಕ ಅವರ ಆರ್ಥಿಕ ಸ್ಥಿತಿ ಸುಧಾರಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.



ಅಕ್ಕಸಾಲಿಗ, ಹಡಪದ, ಮಡಿವಾಳ, ಗಾಣಿಗ, ವಿಶ್ವಕರ್ಮ ಹಾಗೂ ಅಲೆಮಾರಿ ಸಮುದಾಯಗಳ ಸ್ಥಿತಿ ಶೋಚನೀಯವಾಗಿದೆ. ಈ ಸಮುದಾಯಗಳ ಅಭಿವೃದ್ಧಿಗೆ ಸರ್ಕಾರ ವಿಶೇಷ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ವಿಚಾರದಲ್ಲಿ ಕಾಂಗ್ರೆಸ್ ಜನರನ್ನು ದಾರಿತಪ್ಪಿಸುವ ಕೆಲಸ ಮಾಡುತ್ತಿದೆ. ಎಸ್‌ಐಆರ್ ಪ್ರಕ್ರಿಯೆ ಆರಂಭವಾದಾಗಿನಿಂದಲೂ ಆಧಾರರಹಿತ ಆರೋಪಗಳನ್ನು ಮಾಡುತ್ತಾ ಬಂದಿರುವ ಕಾಂಗ್ರೆಸ್, ಅಕ್ರಮ ಮತದಾರರನ್ನು ರಕ್ಷಿಸಿಕೊಳ್ಳಲು ಹತಾಶೆಯಿಂದ ವರ್ತಿಸುತ್ತಿದೆ ಎಂದು ಟೀಕಿಸಿದರು.

ಸಂವಿಧಾನಿಕ ಸಂಸ್ಥೆಗಳ ಕಾರ್ಯವೈಖರಿಯನ್ನು ಪ್ರಶ್ನಿಸುವ ಮೂಲಕ ರಾಹುಲ್ ಗಾಂಧಿ ಅವುಗಳನ್ನು ದುರ್ಬಲಗೊಳಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ನಕಲಿ

3ನೇ ಪುಟ.....

ಸಮರ್ಪಕ ವಿದ್ಯುತ್-ನೀರಿಗೆ ಒತ್ತಾಯಿಸಿ ಜೆಸ್ಕಾಂ ಕಚೇರಿ ಮುಂದೆ ನಗರ ಶಾಸಕರ ನೇತೃತ್ವದಲ್ಲಿ ಪ್ರತಿಭಟನೆ

ರಾಯಚೂರು

ನೀರಿಲ್ಲದೆ ರೈತರು ಬೆಳೆದ ಬೆಳೆ ಒಣಗಿ ಹೋಗುತ್ತಿದ್ದು 12 ತಾಸು ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿ ರಾಯಚೂರು ನಗರ ಶಾಸಕ ಡಾ.ಶಿವರಾಜ ಪಾಟೀಲ್ ಮುಂದಾಳತ್ವದಲ್ಲಿ ನೂರಾರು ರೈತರು ನಗರದ ಜೆಸ್ಕಾಂ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ರಾಜ್ಯಕ್ಕೆ ವಿದ್ಯುತ್ ನೀಡುವ ಶಾಖೋತ್ಪನ್ನಗಳಿಗೆ ಭೂಮಿ ನೀಡಿದ ರೈತರಿಗೆ, ಜನರಿಗೆ ವಿದ್ಯುತ್ ಸಮರ್ಪಕವಾಗಿ ನೀಡುತ್ತಿಲ್ಲ. ಬೆಳೆ ಬೆಳೆ ಕೈಗೆ ಬರುವ ಮುನ್ನವೇ ವಿದ್ಯುತ್ ಇಲ್ಲದೇ ಒಣಗಿ ಹೋಗುತ್ತಿವೆ.





ತಾಲೂಕಾದ್ಯಾಂತ 40ಸಾವಿರ ಹೆಕ್ಟೇರ್‌ಕ್ಕೂ ಅಧಿಕ ಹೆಚ್ಚು ಜಮೀನಿನಲ್ಲಿ ಮೆಣಸಿನಕಾಯಿ,ಸಜ್ಜೆ,ಜೋಳ ಸೇರಿದಂತೆ ಅನೇಕ ಬೆಳೆಗಳಿಗೆ ನೀರಿಲ್ಲದೇ ಒಣಗುತ್ತಿವೆ.ಈ ಬಾರಿ ಅತಿಯಾದ ಬಿಸಿಲಿನಿಂದ ಬೆಳೆಗಳ ಮೇಲೆ ಅಪಾರ ಪರಿಣಾಮ ಬೀರುತ್ತಿದೆ. ಕೂಡಲೇಅ.5ರಂದೇ ರಾತ್ರಿ ನೀರು ಕಲ್ಪಿಸುವ ವ್ಯವಸ್ಥೆ ಮಾಡಬೇಕು.ಸದ್ಯದ ಪರಿಸ್ಥಿತಿ ಅರಿತುಕೊಂಡು ಕೆ.ಬಿ.ಜೆ.ಎನ್.ಎಲ್ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಗ್ರಸಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ್ ಇಂಗಳದಾಳ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ನರಸಣ್ಣನಾಯಕ ಜಾಲಹಳ್ಳಿ, ಮಲ್ಲಿಕಾರ್ಜುನ ಸತ್ಯಂಪೇಟ, ಬೂದಯ್ಯ ಸ್ವಾಮಿ, ಉಪಾಪತಿ ಪಾಟೀಲ್ ನಗರಗುಂಡ, ಸೂಗುರಯ್ಯ ಆರ್.ಎಸ್. ಮಠ, ಹಾಜಿ ಮಸ್ತಾನ ಬಿ.ಗಣೇಕಲ್, ರಮೇಶ ಅಬಕಾರಿ, ಮುದ್ದಣ್ಣ ನಾಯಕ,ಉಮ್ಮಣ್ಣನಾಯಕ ಮದಲಕಲ್ ಇದ್ದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಂದ ರಾಜ್ಯ ಎನ್‌ಎಸ್‌ಎಸ್ ಪ್ರಶಸ್ತಿ ಸ್ವೀಕರಿಸಿದ ನಾಗರಾಜ

ದೇವನಾಂಪ್ರಿಯ ಕಾಲೇಜಿನಲ್ಲಿ ಸಿಬ್ಬಂದಿ–ವಿದ್ಯಾರ್ಥಿಗಳಿಂದ ಅಭಿನಂದನೆ



ಮಸ್ಕಿ, ಅ. 5–

ಮಸ್ಕಿಯ ದೇವನಾಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಬಿ.ಎ. ತೃತೀಯ ಸೆಮಿಸ್ಟರ್ ವಿದ್ಯಾರ್ಥಿ ನಾಗರಾಜ ಅವರು ರಾಜ್ಯದ ಉತ್ತಮ ರಾಷ್ಟ್ರೀಯ ಸೇವಾ ಯೋಜನೆ ಸ್ವಯಂಸೇವಕ ಪ್ರಶಸ್ತಿ–2026ರ ಕರ್ನಾಟಕದ ಮುಖ್ಯಮಂತ್ರಿ ಸನ್ಮಾನ್ಯ ಡಿ.ಕೆ.

3ನೇ ಪುಟ.....

4 ಸಮುದಾಯ ಎಸ್ಸಿ ಪಟ್ಟಿಯಿಂದ ಕೈಬಿಡಲು ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ

ರಾಯಚೂರು, ಅ.5– ಕರ್ನಾಟಕದ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿರುವ ಲಂಬಾಣಿ, ಭೋವಿ, ಕೊರಚ ಮತ್ತು ಕೊರಮ ಸಮುದಾಯಗಳನ್ನು ಪಟ್ಟಿಯಿಂದ ಕೈಬಿಡುವಂತೆ ಕೋರಿ ನಡೆಸುತ್ತಿರುವ ಕಾನೂನು ಹೋರಾಟ ಮುಂದುವರಿದಿದ್ದು, ಈ ಸಂಬಂಧ ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ವರದಿ ಸಲ್ಲಿಸುವಂತೆ ನ್ಯಾಯಾಲಯ ಸೂಚಿಸಿದೆ ಎಂದು ಡಾ. ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ದೇವಮಿತ್ರ ವಕೀಲರು, ಮಾರುತಿ ರಾವ್ ಜಂಬಗಾ, ಕೃಷ್ಣ ಸಿ.ಎಂ.



ಹಾಗೂ ತಮ್ಮ ನೇತೃತ್ವದಲ್ಲಿ 2019ರ ಮೇ 14ರಂದು ಲಂಬಾಣಿ, ಭೋವಿ, ಕೊರಚ ಮತ್ತು ಕೊರಮ ಸಮುದಾಯಗಳನ್ನು ಪರಿಶಿಷ್ಟ ಜಾತಿಗಳ ಪಟ್ಟಿಯಿಂದ ಕೈಬಿಡುವಂತೆ ಕೋರಿ ಸಂವಿಧಾನದ ಅನುಚ್ಛೇದ 32ರಡಿ ಸುಪ್ರೀಂ ಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಲಾಗಿತ್ತು ಎಂದು ಹೇಳಿದರು.

2020ರ ಫೆಬ್ರವರಿ 14ರಂದು ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ನಾಲ್ಕು ವಾರಗಳೊಳಗೆ ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗಕ್ಕೆ ಮನವಿ ಸಲ್ಲಿಸುವಂತೆ ಸೂಚಿಸಿತ್ತು. ಅದರಂತೆ ಫೆಬ್ರವರಿ 27ರಂದು ಆಯೋಗಕ್ಕೆ ಮನವಿ ಸಲ್ಲಿಸಲಾಗಿತ್ತು. ನಂತರ ಆಯೋಗವು ಕರ್ನಾಟಕ ಸರ್ಕಾರದಿಂದ ಅಗತ್ಯ ಶಿಫಾರಸು ಮತ್ತು ಮಾಹಿತಿಯನ್ನು ಪಡೆಯುವ ಸಂಬಂಧ ಕ್ರಮ ಕೈಗೊಂಡಿತ್ತು ಎಂದರು.

2020ರ ಮಾರ್ಚ್ 12 ಹಾಗೂ ಮೇ 14ರಂದು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಈ ವಿಷಯಕ್ಕೆ ಸಂಬಂಧಿಸಿದ ಶಿಫಾರಸನ್ನು ತ್ವರಿತವಾಗಿ

ಸಲ್ಲಿಸುವಂತೆ ಸೂಚಿಸಿತ್ತು. ಆದರೆ 2023ರ ಫೆಬ್ರವರಿ 16ರಂದು ರಾಜ್ಯದ ಮುಖ್ಯ ಕಾರ್ಯದರ್ಶಿಗಳು ನಾಲ್ಕು ಸಮುದಾಯಗಳನ್ನು ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿಯೇ ಮುಂದುವರಿಸುವ ನಿಲುವನ್ನು ಆಯೋಗಕ್ಕೆ ತಿಳಿಸಿದ್ದರು ಎಂದು ಆರೋಪಿಸಿದರು.

ಇದನ್ನು ಪ್ರಶ್ನಿಸಿ ಮತ್ತೆ ಸುಪ್ರೀಂ ಕೋರ್ಟ್ ಮೊರೆ ಹೋಗಲಾಗಿದ್ದು, ಹೈಕೋರ್ಟ್‌ನಲ್ಲಿ ಪರಿಹಾರ ಕಂಡುಕೊಳ್ಳುವಂತೆ ಸಲಹೆ ದೊರೆತ ಹಿನ್ನೆಲೆಯಲ್ಲಿ 2023ರ ಅಕ್ಟೋಬರ್ 25ರಂದು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಯಿತು. 2024ರ ಏಪ್ರಿಲ್ 4ರಂದು ಹೈಕೋರ್ಟ್ ಕೇಂದ್ರ ಹಾಗೂ ರಾಜ್ಯ

3ನೇ ಪುಟ.....



ಬರ ಪರಿಹಾರ-ಭೂ ಹಕ್ಕಿಗಾಗಿ ರೈತರ ಅಹೋರಾತ್ರಿ ಧರಣಿ

ರಾಯಚೂರು, ಅ.5- ಬರ ಪರಿಹಾರ, ರೈತರ ಸಾಲಮನ್ನಾ, ಸರ್ಕಾರಿ ಭೂಮಿಯ ಮಂಜೂರಾತಿ ಹಾಗೂ ಬಡವರಿಗೆ ನಿವೇಶನ ಹಕ್ಕುಪತ್ರ, ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರೈತ ಸಂಘ, ಜಿಲ್ಲಾ ಸಮಿತಿ ವತಿಯಿಂದ ಸೋಮವಾರ ನಗರದ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಯಿತು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ರೈತ ವಿರೋಧಿ ಹಾಗೂ ಕಾರ್ಪೊರೇಟ್ ಪರವಾದ ನೀತಿಗಳಿಂದ ರೈತರು, ಬಡವರು ಮತ್ತು ಕೂಲಿಕಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬರದ ಮಾನದಂಡಗಳು ಅವೈಜ್ಞಾನಿಕವಾಗಿದ್ದು, ವಾಸ್ತವಿಕ ಬೆಳೆ ನಷ್ಟದ ಆಧಾರದ ಮೇಲೆ ಪರಿಹಾರ ನೀಡುವ ವ್ಯವಸ್ಥೆ ಜಾರಿಯಾಗಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಜಿಲ್ಲೆಯ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಖುಷ್ಕಿ ಭೂಮಿಗೆ ಎಕರೆಗೆ ₹30 ಸಾವಿರ ಹಾಗೂ ನೀರಾವರಿ ಭೂಮಿಗೆ ಎಕರೆಗೆ ₹50 ಸಾವಿರ ಪರಿಹಾರ, ರಾಜ್ಯ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳ ರೈತರ ಸಾಲ ಹಾಗೂ ಮೈಕ್ರೋಫೈನಾನ್ಸ್ ಸಾಲ ಮನ್ನಾ, ವರ್ಷಪೂರ್ತಿ ಉದ್ಯೋಗ ಖಾತ್ರಿ ಕೆಲಸ, ಬಡವರಿಗೆ ಉಚಿತ ಆಹಾರ ಧಾನ್ಯ ವಿತರಣೆ ಮತ್ತು ಬರಪೀಡಿತ ಗ್ರಾಮಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಸಬೇಕು ಎಂದು ಆಗ್ರಹಿಸಲಾಗಿದೆ.

ಇದಲ್ಲದೆ ಸರ್ಕಾರಿ ಹೆಚ್ಚುವರಿ ಭೂಮಿಯಲ್ಲಿ ಹಲವು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಭೂರಹಿತ ರೈತರಿಗೆ ಭೂ ಮಂಜೂರಾತಿ ನೀಡಬೇಕು.

3ನೇ ಪುಟ.....

ಬರ ಅಧ್ಯಯನ: ಶಹಾಪುರದಲ್ಲಿ ಕೇಂದ್ರ ತಂಡದಿಂದ ಬೆಳೆ ಹಾನಿ ಪರಿಶೀಲನೆ



ಯಾದಗಿರಿ,ಅ.05-

ಖಾರಿಫ್ ಹಂಗಾಮಿನ ಬರ ಪರಿಸ್ಥಿತಿ ಅಧ್ಯಯನಕ್ಕೆ ಆಗಮಿಸಿದ್ದ ಕೇಂದ್ರದ ನಿರ್ದೇಶಕ ಡಾ. ಮನ್ ಸಿಂಗ್ ನೇತೃತ್ವದ ತಂಡವು ಭಾನುವಾರ ಶಹಾಪುರ ತಾಲೂಕಿನ ಗುಂಡಳ್ಳಿ, ದೊರನಹಳ್ಳಿ, ಬಿದರಣಿ, ಮದ್ದರಕಿ, ಮುಡಬೂಳ ಸೇರಿದಂತೆ ವಿವಿಧ ಗ್ರಾಮಗಳ ಹೊಲಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ಕುರಿತು ಪರಿಶೀಲನೆ ನಡೆಸಿತು.

ಕೇಂದ್ರ ಸರ್ಕಾರದ ಗೃಹ ಸಚಿವಾಲಯದ ಹಿರಿಯ ಅಧಿಕಾರಿಗಳಾದ ಡಾ. ಮನ್ ಸಿಂಗ್, ಅಧೀನ ಕಾರ್ಯದರ್ಶಿಗಳಾದ ಪಾರ್ಥಪಾಲ್ ಹಾಗೂ ರಾಕೇಶ್ ಕುಮಾರ್ ಅವರನ್ನೊಳಗೊಂಡ ತಂಡವು ಬೆಳಿಗ್ಗೆ ಯಾದಗಿರಿಯಿಂದ ನೇರವಾಗಿ ಶಹಾಪುರ ರಸ್ತೆಯ ಗುಂಡಳ್ಳಿ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ನಿಂಗವ್ವ ಅವರಿಗೆ ಸೇರಿದ ಹತ್ತಿ ಹೊಲಕ್ಕೆ ಭೇಟಿ ನೀಡಿತು. ಅಲ್ಲಿ ಒಣಗಿ ನಿಂತಿದ್ದ ಹತ್ತಿ ಬೆಳೆಯನ್ನು ಪರಿಶೀಲಿಸಿದ ಅಧಿಕಾರಿಗಳು, ಹೊಲದ ಮಾಲೀಕರ ಪುತ್ರ ಶರಣಪ್ಪ ಹಾಗೂ ಇತರ ರೈತರಿಂದ ಬೆಳೆ ಹಾನಿಯ ಕುರಿತು ಮಾಹಿತಿ ಪಡೆದರು.

ಒಂದೂವರೆ ಎಕರೆ ಜಮೀನಿನಲ್ಲಿ ಸುಮಾರು 30 ಸಾವಿರ ರೂ. ಖರ್ಚು ಮಾಡಿ ಹತ್ತಿ ಬಿತ್ತನೆ ಮಾಡಲಾಗಿತ್ತು. ಎಕರೆಗೆ ಸುಮಾರು 10 ಕ್ವಿಂಟಾಲ್ ಹತ್ತಿ ಬೆಳೆಯಬೇಕಾಗಿತ್ತು. ಆದರೆ ಮಳೆಯ ಕೊರತೆಯಿಂದ ಕೇವಲ ಒಂದರಿಂದ ಒಂದೂವರೆ ಕ್ವಿಂಟಾಲ್ ಮಾತ್ರ ಹತ್ತಿ ಬೆಳೆದಿದ್ದು, ಅದೇ ಹೆಚ್ಚಾಗಿದೆ. ಇಡೀ ಗ್ರಾಮದ ಹತ್ತಿ ಬೆಳೆ ಒಣಗಿ ಹೋಗಿದ್ದು, ರೈತರ ಸ್ಥಿತಿ ಚಿಂತಾಜನಕವಾಗಿದೆ ಎಂದು ರೈತ ಶರಣಪ್ಪ ತಂಡಕ್ಕೆ ವಿವರಿಸಿದರು. ಸ್ಥಳದಲ್ಲಿದ್ದ ರೈತರಾದ ದೇವೇಂದ್ರಪ್ಪ, ಮೊಹಮ್ಮದ್ ಖಾದ್ರಿ, ಸಿದ್ದಣ್ಣ, ಕಾಶಿಪತಿ ಹಾಗೂ ರಮೇಶ ಚವ್ಹಾಣ ಅವರು ಸಹ ಬೆಳೆ ಹಾನಿಯ ಕುರಿತು ಮಾಹಿತಿ ನೀಡಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ರತೇಂದ್ರನಾಥ ಸೂಗುರ ಅವರು ಹತ್ತಿ ಬೆಳೆಯ ಪರಿಸ್ಥಿತಿ ಕುರಿತು ತಂಡಕ್ಕೆ ಸಮಗ್ರ ಮಾಹಿತಿ ನೀಡಿದರು. ಕೃಷಿ ವಿಶ್ವವಿದ್ಯಾಲಯದ ಅಧಿಕಾರಿಗಳು ಸಹ ಅಗತ್ಯ ಮಾಹಿತಿಯನ್ನು ಒದಗಿಸಿದರು.

ನಂತರ ತಂಡವು ದೊರನಹಳ್ಳಿ ಗ್ರಾಮದ ಹೊಲಗಳಿಗೆ ಭೇಟಿ ನೀಡಿ ರೈತ ನಿಂಗಣ್ಣ ಮಲಗೊಂಡ ಅವರ ಜಮೀನಿನಲ್ಲಿ ಒಣಗಿ ನಿಂತಿದ್ದ ಹತ್ತಿ, ತೊಗರಿ ಸೇರಿದಂತೆ ವಿವಿಧ ಬೆಳೆಗಳನ್ನು ಪರಿಶೀಲಿಸಿತು. ಈ ಸಂದರ್ಭದಲ್ಲಿ ರೈತರಾದ ಕಲ್ಲಪ್ಪ ಹಾಗೂ ಹಣಮಂತಪ್ಪ ದೊರನಳ್ಳಿ ಅವರು ಮಳೆಯಿಲ್ಲದೇ ಬಿತ್ತಿದ ಬೆಳೆಗಳು ಸಂಪೂರ್ಣ ಹಾನಿಯಾಗಿದ್ದು, ಇದರಿಂದ ರೈತರ ಸ್ಥಿತಿ ಹದಗೆಟ್ಟಿದೆ ಎಂದು ತಿಳಿಸಿದರು. 1972ರಲ್ಲಿ ತಲೆದೋರಿದ್ದ ಬರಗಾಲದ ರೀತಿಯೇ ಈ ಬಾರಿಯೂ ಬರ ಪರಿಸ್ಥಿತಿ ಎದುರಾಗಿದೆ ಎಂಬುದು ಹಿರಿಯ ರೈತರ ಅಭಿಪ್ರಾಯವಾಗಿದೆ ಎಂದು ಅವರು ತಂಡಕ್ಕೆ ತಿಳಿಸಿದರು.

ರೈತ ಹಯ್ಯಾಳಪ್ಪ ದೊಡಮನಿ ಅವರು ಮಳೆ ಕೊರತೆ ಹಾಗೂ ತೀವ್ರ ನೀರಿನ ಅಭಾವದಿಂದ ಹತ್ತಿ ಮತ್ತು ತೊಗರಿ ಬೆಳೆ ನಾಶವಾಗಿದೆ ಎಂದು ತಿಳಿಸಿದರು. ರೈತರಾದ ಸಿದ್ದಪ್ಪ ಹಾಗೂ ಮಲ್ಲಿಕಾರ್ಜುನ ಬಡಿಗೇರ್ ಅವರೂ ಬೆಳೆ ಹಾನಿಯ ಕುರಿತು ತಂಡಕ್ಕೆ ಮಾಹಿತಿ ನೀಡಿದರು.

ತೀವ್ರ ಮಳೆ ಕೊರತೆಯಿಂದ ಉಂಟಾಗಿರುವ ಪರಿಸ್ಥಿತಿ, ಕೃಷಿ ಚಟುವಟಿಕೆಗಳ ಮೇಲಾದ ಪರಿಣಾಮ, ವಿವಿಧ ಬೆಳೆಗಳ ಸ್ಥಿತಿ ಹಾಗೂ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಕೇಂದ್ರ ತಂಡವು ಮಾಹಿತಿ ಸಂಗ್ರಹಿಸಿತು. ಬಳಿಕ ಬಿದರಣಿ ಹಾಗೂ ಮುಡಬೂಳ ಗ್ರಾಮಗಳಿಗೆ ಭೇಟಿ ನೀಡಿದ ತಂಡವು ಬಿ.ಟಿ. ಹತ್ತಿ ಬೆಳೆ ನಾಶ, ತೊಗರಿ ಬೆಳೆ ಹಾನಿ ಹಾಗೂ ನೀರು ಸರಬರಾಜು ಸಮಸ್ಯೆಯಿರುವ ಸ್ಥಳಗಳನ್ನು ಪರಿಶೀಲಿಸಿತು. ನಂತರ ತಂಡವು ದೇವದುರ್ಗದತ್ತ ಪ್ರಯಾಣ ಬೆಳೆಸಿತು. ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ, ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ, ಸಹಾಯಕ ಆಯುಕ್ತ ಶ್ರೀಧರ್ ಗೋಟೂರ್ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರಾಘವೇಂದ್ರ, ಶಹಾಪುರ ತಹಶೀಲ್ದಾರ್ ತಾಲ್ಲೂಕು ಪಂಚಾಯತ್ ಇಒ, ಪಶುಪಾಲನೆ, ತೋಟಗಾರಿಕೆ, ಆರ್‌ಡಿಪಿಆರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಯಾದಗಿರಿ ಜಿಲ್ಲೆಗೆ ಭೇಟಿ ನೀಡಿದ ಕೇಂದ್ರ ತಂಡವು ಬೆಳೆ ಹಾನಿ ಪರಿಶೀಲನೆಗೂ ಮುನ್ನ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ಮಾಹಿತಿಯನ್ನು ಪಡೆದುಕೊಂಡಿತು. ರಾಜ್ಯದ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿರುವ ಕೇಂದ್ರದ ಮೂರು ಬರ ಅಧ್ಯಯನ ತಂಡಗಳು ಬೆಳೆ ಹಾನಿ ಹಾಗೂ ರೈತರ ಸಂಕಷ್ಟದ ಕುರಿತು ಸಮಗ್ರ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿವೆ.

ಎಸ್.ಐ.ಆರ್ ಪರಿಷ್ಕರಣೆ ನೋಟಿಸ್ ಪಡೆದ ಮತದಾರರ ಮನೆಗಳಿಗೆ ಬಿಎಲ್‌ಒಗಳ ಭೇಟಿ: ಡಿಸಿ ಇಕ್ರಮ್ ಶರೀಫ್



ಕಲಬುರಗಿ,ಅ.05-

ವಿಶೇಷ ಸಮಗ್ರ ಪರಿಷ್ಕರಣೆ ಸಂದರ್ಭದಲ್ಲಿ ನೋ ಮ್ಯಾಪಿಂಗ್ ಮತ್ತು ಲಾಜಿಕಲ್ ಡಿಸ್ಕ್ರೆಪೆನ್ಸೀಸ್ ಕಾರಣದಿಂದ ನೋಟಿಸ್ ಪಡೆದ ಮತದಾರರ ಮನೆಗಳಿಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಭೇಟಿ ನೀಡಿ ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ನಲ್ಲಿ ಅಪ್‌ಲೋಡ್ ಮಾಡಲಿದ್ದಾರೆ. ಹೀಗಾಗಿ ನೋಟಿಸ್ ಪಡೆದ ಎಲ್ಲ ಮತದಾರರು ಮತದಾರರ ನೋಂದಣಾಧಿಕಾರಿ ಅಥವಾ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಸಮಕ್ಷಮ ವಿಚಾರಣೆಗೆ ಹಾಜರಾಗುವ ಅಗತ್ಯವಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ಸೆ.26, 2026ರಂದು ನಡೆದ ಸಭೆಯಲ್ಲಿ ಕೈಗೊಂಡ ನಿರ್ಧಾರದಂತೆ, ಮತದಾರರ ನೋಂದಣಾಧಿಕಾರಿ ನಿರ್ಧರಿಸುವ ಅಸಾಧಾರಣ ಸಂದರ್ಭಗಳಲ್ಲಿ ಮಾತ್ರ ಮತದಾರರು ಅಥವಾ ಮತದಾರರ ಕುಟುಂಬದ ಯಾವುದೇ ವಯಸ್ಕ ಸದಸ್ಯರು ಆನ್‌ಲೈನ್ ಮೂಲಕ ವಿಚಾರಣೆಗೆ ಹಾಜರಾಗಲು ಅವಕಾಶ ಕಲ್ಪಿಸುವಂತೆ ನಿರ್ದೇಶನ ನೀಡಿದೆ. ಅದರಂತೆ ಜಿಲ್ಲೆಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ರಾತ್ರಿ ಆಶ್ರಯ ತಾಣಗಳಲ್ಲಿ ವಾಸಿಸುವವರು, ಕಾರ್ಮಿಕರು, ಬಡವರು, ನಿರ್ಗತಿಕರು ಸೇರಿದಂತೆ ವಿವಿಧ ವರ್ಗಗಳ ಮತದಾರರಿಗೆ ಅಗತ್ಯಕ್ಕೆ ತಕ್ಕಂತೆ ಸಾಕಷ್ಟು ಸಂಖ್ಯೆಯಲ್ಲಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಮತದಾರರ ಸಹಾಯಕ್ಕಾಗಿ ವಿಶೇಷ ಶಿಬಿರಗಳನ್ನು ಸಹ ಆಯೋಜಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಗೆ ನಮೂನೆ-6ರೊಂದಿಗೆ ಲಗತ್ತಿಸಲಾದ ಘೋಷಣೆಯನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ. ಪರಿಷ್ಕರಣೆ ಇಲ್ಲದ ಸಂದರ್ಭದಲ್ಲಿ ನಿಯಮಗಳ ಪ್ರಕಾರ ಅನ್ವಯವಾಗುವ ನಮೂನೆಗಳನ್ನು ಮತದಾರರ ನೋಂದಣಿ ನಿಯಮಗಳು 1960ರಂತೆ ಬಳಸಲಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಇಸಿಐಯ ಅಧಿಕೃತ ಪೋರ್ಟಲ್‌ನಲ್ಲಿ ಎಸ್‌ಐಆರ್ 2026ಕ್ಕೆ ಸಂಬಂಧಿಸಿದಂತೆ ನೋಟಿಸ್‌ಗೆ ದಾಖಲೆ ಸಲ್ಲಿಸುವ ಹಾಗೂ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಹುಡುಕುವ ಸೌಲಭ್ಯವೂ ಲಭ್ಯವಿದೆ.

ಗಣೇಶೋತ್ಸವ ಸಮಾಜದ ಸಾಮರಸ್ಯದ ಪ್ರತೀಕ



ಅಫಜಲಪುರ,ಅ.05-

ಗಣೇಶೋತ್ಸವವು ನಮ್ಮ ಸಂಸ್ಕೃತಿ, ಧಾರ್ಮಿಕ ನಂಬಿಕೆ ಹಾಗೂ ಸಾಮಾಜಿಕ ಸಾಮರಸ್ಯದ ಪ್ರತೀಕವಾಗಿದೆ. ಯುವಕರು ಧಾರ್ಮಿಕ ಆಚರಣೆಗಳ ಜೊತೆಗೆ ಸಮಾಜಮುಖಿ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಉದ್ಯಮಿ ಶಂಕರ ಮ್ಯಾಕೇರಿ ಹೇಳಿದರು.


ಪಟ್ಟಣದ ಅಂಬಿಗರ ಚೌಡಯ್ಯ ನಗರದಲ್ಲಿ ಶ್ರೀ ನಿಜ ಶರಣ ಯುವಕ ಮಂಡಳಿ ವತಿಯಿಂದ 21 ದಿನಗಳ ಕಾಲ ಆಯೋಜಿಸಿದ್ದ ಶ್ರೀ ಗಣೇಶ ಮೂರ್ತಿ ಪ್ರತಿಷ್ಠಾಪನಾ ಉತ್ಸವದ ಅಂಗವಾಗಿ ಭಾನುವಾರ ಸಂಜೆ ನಡೆದ ಭವ್ಯ ಗಣೇಶ ವಿಸರ್ಜನಾ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

21 ದಿನಗಳ ಕಾಲ ಶಿಸ್ತು, ಭಕ್ತಿಭಾವ ಹಾಗೂ ಸಂಭ್ರಮದಿಂದ ಗಣೇಶೋತ್ಸವವನ್ನು ಯಶಸ್ವಿಯಾಗಿ ಆಯೋಜಿಸಿರುವ ಶ್ರೀ ನಿಜ ಶರಣ ಯುವಕ ಮಂಡಳಿಯ ಕಾರ್ಯ ಶ್ಲಾಘನೀಯ. ಇಂತಹ ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಪರಸ್ಪರ ಪ್ರೀತಿ, ಸೌಹಾರ್ದತೆ ಹಾಗೂ ಒಗ್ಗಟ್ಟನ್ನು ಬೆಳೆಸಲು ಸಹಕಾರಿಯಾಗುತ್ತವೆ. ಗಣೇಶನ ಕೃಪೆಯಿಂದ ನಾಡಿನಲ್ಲಿ ಸುಖ, ಶಾಂತಿ ಹಾಗೂ ಸಮೃದ್ಧಿ ನೆಲೆಸಲಿ ಎಂದು ಅವರು ಹಾರೈಸಿದರು. ಶ್ರೀ ಮಳೇಂದ್ರ ಮಠದ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಕ್ತರು ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಗಣೇಶನ ಜಯಘೋಷಗಳೊಂದಿಗೆ ವಿಸರ್ಜನಾ ಮೆರವಣಿಗೆ ಆರಂಭವಾಯಿತು.

ಮೆರವಣಿಗೆಯಲ್ಲಿ ಯುವಕರು ಸಂಭ್ರಮದಿಂದ ಕುಣಿದು ಕುಪ್ಪಳಿಸುವ ಮೂಲಕ ಭಕ್ತಿ ಹಾಗೂ ಉತ್ಸಾಹ ಮೆರೆದರು. ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ಸಾಗಿದ ಮೆರವಣಿಗೆಯಲ್ಲಿ ಸಾರ್ವಜನಿಕರು ಗಣೇಶನ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಫಜಲಪುರ ಪೊಲೀಸ್ ಠಾಣೆಯ ಸಿಪಿಐ ಲಖನ್ ಮಸಗುಪ್ಪಿ, ಮುಖಂಡರಾದ ಸಿದ್ದು ಮ್ಯಾಕೇರಿ, ಬಸವರಾಜ ಚಿಂಚೋಳಿ ಸೇರಿದಂತೆ ನೂರಾರು ಯುವಕರು ಹಾಗೂ ಪಟ್ಟಣದ ಭಕ್ತರು ಪಾಲ್ಗೊಂಡು ಉತ್ಸವವನ್ನು ಯಶಸ್ವಿಗೊಳಿಸಿದರು.

ಚಿತ್ತಾಪುರ ದಿ.ವಿಠಲ್ ಹೇರೂರ ಮೂರ್ತಿ ಸರಕಾರವೇ ಸ್ಥಾಪನೆ ಮಾಡುವಂತೆ ಕೋಲಿ ಸಮಾಜ ಆಗ್ರಹ



ಚಿತ್ತಾಪುರ,ಅ.05-

ಕಲಬುರಗಿ ನಗರದಲ್ಲಿನ ಹೈಕೋರ್ಟ್ ಹತ್ತಿರ ಅಫಜಲಪುರಕ್ಕೆ ಸಂಪರ್ಕಿಸುವ ವೃತ್ತದಲ್ಲಿ ಕೋಲಿ, ಕಬ್ಬಲಿಗ ಸಮಾಜದ ನಾಯಕ, ಹೋರಾಟಗಾರ ದಿ.ವಿಠಲ್ ಹೇರೂರ ಅವರ ಮೂರ್ತಿಯನ್ನು ಸರ್ಕಾರವೇ ಸ್ಥಾಪನೆ ಮಾಡಬೇಕು ಎಂದು ಆಗ್ರಹಿಸಿ ಕೋಲಿ ಸಮಾಜದ ತಾಲೂಕು ಅಧ್ಯಕ್ಷ ನಿಂಗಣ್ಣ ಹೆಗಲೇರಿ ಅವರ ನೇತೃತ್ವದಲ್ಲಿ ಮುಖಂಡರು ಪ್ರತಿಭಟಿಸಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ಗ್ರೇಡ್-2 ತಹಶೀಲ್ದಾರ್ ಅವರಿಗೆ ಸಲ್ಲಿಸಿದರು.

ಕೋಲಿ, ಕಬ್ಬಲಿಗ ಸಮಾಜವನ್ನು ಸಂಘಟಿಸಿದ ಸಂಘಟನಾಕಾರ, ಸಮಾಜಕ್ಕೆ ಸಾಮಾಜಿಕ ನ್ಯಾಯ ಕೊಡಿಸಲು ತಮ್ಮ ಜೀವನವೇ ಪಣವಾಗಿಟ್ಟು ಕೊನೆ ಉಸುರಿನ ತನಕ ಹೋರಾಟ ನಡೆಸಿದ ಧೀಮಂತ ಹೋರಾಟಗಾರ, ಸರ್ವ ಸಮಾಜಗಳ ಪ್ರೀತಿ, ವಿಶ್ವಾಸ ಗಳಿಸಿದ ಸಾಮಾಜಿಕ ಹೋರಾಟಗಾರ ಕೋಲಿ, ಕಬ್ಬಲಿಗ ಸಮಾಜದ ನೇತಾರ ದಿ.ವಿಠಲ್ ಹೇರೂರ ಜೀ ಅವರ ಮೂರ್ತಿಯನ್ನು ಕಲಬುರಗಿ ನಗರದಲ್ಲಿರುವ ಹೈಕೋರ್ಟ್ ಸಮೀಪದಲ್ಲಿರುವ ಅಫಜಲಪುರಕ್ಕೆ ಸಂಪರ್ಕಿಸುವ ವೃತ್ತದಲ್ಲಿ ಸರ್ಕಾರದಿಂದ ಸ್ಥಾಪಿಸಬೇಕು ಅಥವಾ ಮೂರ್ತಿ ಸ್ಥಾಪನೆ ಮಾಡಿಕೊಳ್ಳಲು ಸಮಾಜಕ್ಕೆ ಸರ್ಕಾರದಿಂದ ಅಧಿಕೃತವಾಗಿ ಅನುಮತಿ ನೀಡಬೇಕು ಎಂದು ಒತ್ತಾಯಿಸಿದರು.

ಕಳೆದ 2013 ರಿಂದ ಸದರಿ ವೃತ್ತದಲ್ಲಿ ದಿ.ವಿಠಲ್ ಹೇರೂರ ಅವರ ಭಾವಚಿತ್ರವುಳ್ಳ ನಾಮಫಲಕ ಹಾಕಿ ಪ್ರತಿ ವರ್ಷ ಪುಣ್ಯಸ್ಮರಣೆ, ಜಯಂತಿ, ಅನ್ನದಾಸೋಹ, ಪೂಜಾ ಕಾರ್ಯಕ್ರಮ ಮಾಡುತ್ತಾ ಬರಲಾಗುತ್ತಿದೆ. ಸದರಿ ವೃತ್ತವು ಈಗಾಗಲೇ ದಿ.ವಿಠಲ್ ಹೇರೂರ ವೃತ್ತ ಎಂದು ಪ್ರಸಿದ್ಧಿಯಾಗಿದೆ. ಆದರೆ, ಸದರಿ ವೃತ್ತದಲ್ಲಿ ಕುರುಬ ಸಮಾಜದ ಕೆಲವರು ರಾತ್ರೋರಾತ್ರಿ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಮೂರ್ತಿ ಇಟ್ಟಿದ್ದನ್ನು ಮಹಾನಗರ ಪಾಲಿಕೆ ಆಡಳಿತ ತಕ್ಷಣ ಸ್ಥಳದಿಂದ ತೆರವುಗೊಳಿಸಿದೆ. ಒಂದು ಸಮಾಜದ ನಾಯಕನ ಹೆಸರಲ್ಲಿ ನಾಮಫಲಕ ಹಾಕಿದ್ದು ಗೊತ್ತಿದ್ದರೂ ಮೂರ್ತಿ ತಂದು ಕೂಡಿಸಿದ್ದು ಕೋಲಿ, ಕಬ್ಬಲಿಗ ಸಮಾಜಕ್ಕೆ ಅವಮಾನಿಸುವ, ಸಮಾಜದ ಸ್ವಾಭಿಮಾನಕ್ಕೆ ಧಕ್ಕೆ ತರುವ, ದಿ.ವಿಠಲ್ ಹೇರೂರ ಅವರಿಗೆ ಅವಮಾನಿಸುವ ಕೆಲಸ ಮಾಡಲಾಗಿದೆ. ಇದನ್ನು ಸಮಾಜವು ಎಂದಿಗೂ ಸಹಿಸುವುದಿಲ್ಲ. ಸದರಿ ವೃತ್ತದಲ್ಲಿ ದಿ.ವಿಠಲ್ ಹೇರೂರ ಅವರ ಮೂರ್ತಿ ಹೊರತುಪಡಿಸಿ ಬೇರೆ ಯಾರದ್ದೆ ಮೂರ್ತಿ ಕೂಡಿಸಲು ಬಿಡುವುದಿಲ್ಲ. ಸಮಾಜದ ಘನತೆ, ಗೌರವ, ಸ್ವಾಭಿಮಾನಕ್ಕೆ ಧಕ್ಕೆ ತರುವ ಕೆಲಸ ಯಾರೆ ಮಾಡಿದರೂ ಅದನ್ನು ಸಹಿಸುವುದಿಲ್ಲ ಮತ್ತು ತೀವ್ರವಾಗಿ ಖಂಡಿಸುತ್ತೇವೆ ಎಂದು ಹೇಳಿದರು.

ಸರಕಾರವು ಕುರುಬ ಸಮಾಜಕ್ಕೆ ಮನವರಿಕೆ ಮಾಡಿಕೊಟ್ಟು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂರ್ತಿ ಸ್ಥಾಪನೆಗೆ ಅವಕಾಶ ಮಾಡಿಕೊಡಬಾರದು. ಕೋಲಿ, ಕಬ್ಬಲಿಗ ಸಮಾಜದ ಮನವಿ ಕಡೆಗಣಿಸಿದರೆ ಸಮಾಜವು ಬೀದಿಗಿಳಿದು ಹೋರಾಟ ಮಾಡುವುದು ಅನಿವಾರ್ಯ ಎಂದು ಮುಖಂಡರು ಎಚ್ಚರಿಸಿದರು. ಈ ಸಂದರ್ಭದಲ್ಲಿ ಕೋಲಿ ಸಮಾಜದ ಗೌರವಾಧ್ಯಕ್ಷ ರಾಮು ಲಿಂಗ ಬಾನರ್ ಪ್ರಧಾನ ಕಾರ್ಯ ದರ್ಶಿ ಕರಣಕುಮಾರ ಅಲ್ಲೂರ, ನಗರಾಧ್ಯಕ್ಷ ಪ್ರಭು ಹಲಕರ್ಟಿ, ಮುಖಂಡರಾದ ಭೀಮಣ್ಣ ಹೊತಿ ನಮಡಿ, ಶರಣಪ್ಪ ನಾಶಿ, ಬಸವ ರಾಜ ಚಿನ್ನಮಳ್ಳಿ, ಮಲ್ಲಿಕಾರ್ಜುನ ಎಮ್ಮೆನೋರ, ಲಕ್ಷ್ಮೀಕಾಂತ ಸಾಲಿ, ಮುನಿಯಪ್ಪ ಕೊಳ್ಳಿ, ಚಂದ್ರು ಕಾಳಗಿ, ದೇವಿಂದ್ರ ಅರಣಕಲ್, ದತ್ತು ವೈನಾಳಕರ್ ರಾಜು ಮುಧೋಳ, ಶರಣಪ್ಪ ಸಿದ್ರಾಮಗೋಳ, ಮಾರುತಿ ಇವಣಿ, ಶಿವಪ್ಪ ದೊಡ್ಡಮನಿ, ದಶರಥ ದೊಡ್ಡಮನಿ, ಮಲ್ಲು ಕೊಳಕೋರ ಸೇರಿದಂತೆ ಇತರರು ಇದ್ದರು.

ಸುರಕ್ಷತೆಗಾಗಿ ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸಿ: ರಾಘವೇಂದ್ರ ಉಪಾಧ್ಯೆ



ಬೀದರ್,ಅ,05-

ಹೆಲ್ಮೆಟ್ ಇಲ್ಲದೆ ವಾಹನ ಓಡಿಸಿದರೆ ಸರ್ಕಾರಕ್ಕೆ ಯಾವುದೇ ನಷ್ಟವಿಲ್ಲ. ನಿಮ್ಮ ಸುರಕ್ಷತೆಗಾಗಿಯೇ ಸರ್ಕಾರ ದಂಡ ವಿಧಿಸುತ್ತದೆ. ಆದ್ದರಿಂದ ಬೈಕ್ ಚಲಾಯಿಸುವ ಎಲ್ಲರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ರಾಘವೇಂದ್ರ ಉಪಾಧ್ಯೆ ಸಲಹೆ ನೀಡಿದರು.

ಔರಾದ್ ತಾಲೂಕಿನ ಗುಡಪಳ್ಳಿ ಗ್ರಾಮದಲ್ಲಿ ಶನಿವಾರ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 60 ದಿನಗಳ ಬೃಹತ್ ಕಾನೂನು ಜಾಗೃತಿ ಅಭಿಯಾನದ ನಿಮಿತ್ತ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಪ್ರಾದೇಶಿಕ ಸಾರಿಗೆ ಕಚೇರಿ, ಬೀದರ್ ಸಹಯೋಗದಲ್ಲಿ ಆಯೋಜಿಸಿದ್ದ ರಸ್ತೆ ಸುರಕ್ಷತೆ ಮತ್ತು ಸಾರಿಗೆ ಸೇವಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮನ್ನು ನಂಬಿ ಬದುಕುತ್ತಿರುವ ಕುಟುಂಬದವರಿಗಾಗಿಯಾದರೂ ರಸ್ತೆ ನಿಯಮಗಳನ್ನು ಪಾಲಿಸಬೇಕು. ವಿಮೆ ಇಲ್ಲದೆ ವಾಹನ ಚಲಾಯಿಸಿ ಅಪಘಾತ ಸಂಭವಿಸಿದರೆ ಮೂರನೇ ವ್ಯಕ್ತಿಗೆ ಪರಿಹಾರವನ್ನು ವಾಹನದ ಮಾಲೀಕರು ಭರಿಸಬೇಕಾಗುತ್ತದೆ. ಇಂದಿನ ಕಾಲದಲ್ಲಿ ದಂಡದ ಮೊತ್ತವು 10 ಲಕ್ಷ ರೂ. ದಿಂದ 1 ಕೋಟಿ ರೂ. ವರೆಗೂ ಆಗಬಹುದು ಎಂದು ಅವರು ಎಚ್ಚರಿಸಿದರು.

ಔರಾದ್‌ನ ಹಿರಿಯ ಸಿವಿಲ್ ನ್ಯಾಯಾಧೀಶ ಹಾಜಿ ಹುಸೇನಸಾಬ್ ಯಾದವಾಲ್ ಮಾತನಾಡಿ, ಜಿಲ್ಲೆಯಲ್ಲೇ ಗುಡಪಳ್ಳಿ ಗ್ರಾಮವನ್ನು ಇಂತಹ ಕಾರ್ಯಕ್ರಮಕ್ಕೆ ಆಯ್ಕೆ ಮಾಡಲಾಗಿದೆ. ಆಧಾರ್ ಕಾರ್ಡ್, ಜನ್ಮ ದಿನಾಂಕ ಪತ್ರ, ಪಹಣಿ ತಿದ್ದುಪಡಿ, ಚಾಲನಾ ಪರವಾನಗಿ ಹಾಗೂ ವಿಮೆ ಸೇರಿದಂತೆ ಹತ್ತು ಹಲವು ಸೇವೆಗಳು ನಿಮ್ಮ ಮನೆ ಬಾಗಿಲಿಗೆ ಬಂದಿವೆ. ಗ್ರಾಮಸ್ಥರು ಈ ಅಭಿಯಾನದ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಸಾರಿಗೆ ಅಧಿಕಾರಿ ಎಂ.ಡಿ. ಜಾಫರ್ ಸಾದಿಕ್ ಮಾತನಾಡಿ, ದ್ವಿಚಕ್ರ ವಾಹನವನ್ನು ಗಂಟೆಗೆ 60 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ಚಲಾಯಿಸಿ ಅಪಘಾತವಾದರೆ ತಲೆಗೆ ಗಂಭೀರ ಪೆಟ್ಟಾಗುವ ಸಾಧ್ಯತೆ ಹೆಚ್ಚಿರುತ್ತದೆ. ಕಡಿಮೆ ವೇಗದಲ್ಲಿ ವಾಹನ ಚಲಾಯಿಸಿದರೆ ಗಾಯದ ಪ್ರಮಾಣ ಕಡಿಮೆಯಾಗಿ ಜೀವ ಉಳಿಸುವ ಸಾಧ್ಯತೆ ಹೆಚ್ಚುತ್ತದೆ. ಮುಖವನ್ನು ಪೂರ್ಣವಾಗಿ ಮುಚ್ಚುವ ಫುಲ್‌ಫೇಸ್ ಹೆಲ್ಮೆಟ್ ಬಳಸಬೇಕು. ಕೂದಲು ಉದುರುತ್ತದೆ ಎಂಬ ಕಾರಣ ನೀಡಿ ಹೆಲ್ಮೆಟ್ ಧರಿಸುವುದನ್ನು ನಿಲ್ಲಿಸಬಾರದು ಎಂದು ತಿಳಿಸಿದರು.

ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಗುಡಪಳ್ಳಿ ಗ್ರಾಮದ 40 ಜನರಿಗೆ ಕಲಿಕಾ ಚಾಲನಾ ಪರವಾನಗಿ ನೀಡಲಾಗಿದೆ. ಹಾಗೆಯೇ ಆರು ಜನರಿಗೆ ವಾಹನ ವಿಮೆ ಮಾಡಿಸಿಕೊಳ್ಳಲು ನೆರವು ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಈ ವೇಳೆ ಬೀದರ್‌ನ ಕೈಲಾಶ್ ಶೋರೂಂ ಹಾಗೂ ರಮೇಶ್ ಹೋಂಡಾ ಶೋರೂಂ ವತಿಯಿಂದ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ನ್ಯಾಯವಾದಿ ಸಂತೋಷ್ ಕೌಟಗೆ, ಮೋಟಾರು ವಾಹನ ನಿರೀಕ್ಷಕ ಪ್ರಕಾಶ್ ಎಚ್. ಉಳ್ಳೆ, ಆಕಾಶ್ ನಾಗಮಾರಪಳ್ಳಿ, ಪ್ರವೀಣ್ ಗೋಯಲ್, ಡಾ. ರಘು ಕೃಷ್ಣಮೂರ್ತಿ, ಎಸ್‌ಡಿಎಂಸಿ ಅಧ್ಯಕ್ಷ ತುಳಸಿರಾಮ್ ಪಾಂಚಾಳ್, ಮಲ್ಲಿಕಾರ್ಜುನ್ ಕೆಂಚ, ಬಾಬುರೆಡ್ಡಿ, ಪರಶುರಾಮ್ ಚವ್ಹಾಣ್, ಶಂಕರರೆಡ್ಡಿ, ಕಾನೂನು ಸೇವಾ ಪ್ರಾಧಿಕಾರದ ಸಿಬ್ಬಂದಿ ಆಕಾಶ್ ಹಾಗೂ ನರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಭಾಗ್ಯವಂತಿ ಮೋಟಾರು ಡ್ರೈವಿಂಗ್ ಸ್ಕೂಲ್‌ನ ಪ್ರಾಚಾರ್ಯ ಶಿವರಾಜ್ ಜಮಾದಾರ್ ಖಾಜಾಪುರ ನಿರೂಪಿಸಿ, ವಂದಿಸಿದರು.

ಯುವ ಸಮೂಹ ಪುಸ್ತಕ ಓದುವ ಅಭಿರುಚಿ ಬೆಳೆಸಿಕೊಳ್ಳಲಿ: ರಾಜೇಶ್ ಸಿಂಧೆ



ಬೀದರ್,ಅ.04-

ಯುವ ಸಮೂಹ ಪುಸ್ತಕ ಓದುವ ಅಭಿರುಚಿಯನ್ನು ಮೈಗೂಡಿಸಿ ಕೊಂಡರೆ ಮಾನವೀಯ ಮೌಲ್ಯಗಳು ಬೆಳೆಯಲು ಸಾಧ್ಯವಾಗುತ್ತದೆ ಎಂದು ಪತ್ರಕರ್ತ ರಾಜೇಶ್ ಸಿಂಧೆ ಅಭಿಪ್ರಾಯಪಟ್ಟರು.

ನಗರದ ಕುಂಬಾರವಾಡ ಬಡಾವಣೆಯ ಸಾಹಿತಿ, ಶಿಕ್ಷಕ ಸಂಜೀವಕುಮಾರ್ ಅತಿವಾಳೆ ಅವರ ನಿವಾಸದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಜಾಗೃತ ಸಮಿತಿ, ಬೀದರ್ ಹಾಗೂ ಜನಪರ ಸಾಂಸ್ಕೃತಿಕ ಪ್ರತಿಷ್ಠಾನ ಸಹಯೋಗದಲ್ಲಿ ಆಯೋಜಿಸಿದ್ದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಹಾಗೂ ಕವಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಆಧುನಿಕ ತಂತ್ರಜ್ಞಾನ ಬೆಳೆದಂತೆ ಪುಸ್ತಕ ಓದುವ ಸಂಸ್ಕೃತಿ ಕುಗ್ಗುತ್ತಿರುವ ಈ ಸಂದರ್ಭದಲ್ಲಿ ತಂತ್ರಜ್ಞಾನವನ್ನು ಸದ್ಬಳಕೆ ಮಾಡಿಕೊಂಡು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಮೌಲ್ಯಯುತ ಕೃತಿಗಳು ಹಲವು ಚಳವಳಿಗಳಿಗೆ ಸ್ಫೂರ್ತಿದಾಯಕವಾಗಿವೆ ಎಂದರು.

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯ ಕುಮಾರ್ ಸೋನಾರೆ ಮಾತನಾಡಿ, ನಮ್ಮ ಭಾಗದಲ್ಲಿ ಅನೇಕ ಪ್ರತಿಭಾನ್ವಿತ ಲೇಖಕರಿದ್ದರೂ ಅವರ ಸಾಹಿತ್ಯವನ್ನು ರಾಜ್ಯಮಟ್ಟದಲ್ಲಿ ಗುರುತಿಸುವ ಕೆಲಸ ನಡೆಯುತ್ತಿಲ್ಲ. ಬರಹಗಾರರು ಹೆಚ್ಚು ಅಧ್ಯಯನದಲ್ಲಿ ತೊಡಗಿ ಗಟ್ಟಿಯಾದ ಸಾಹಿತ್ಯ ಹೊರತರಲು ಮುಂದಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ್ ಅತಿವಾಳೆ ಮಾತನಾಡಿ, ಬೀದರ್ ಜಿಲ್ಲೆಯಲ್ಲಿರುವ ಪ್ರತಿಭಾನ್ವಿತ ಸಾಹಿತಿಗಳು ಹಾಗೂ ಲೇಖಕರನ್ನು ಗುರುತಿಸುವ ಕೆಲಸ ಹೆಚ್ಚಾಗಿ ನಡೆಯಬೇಕಿದೆ. ಕಾವ್ಯ, ಕಥೆ ಹಾಗೂ ಕಮ್ಮಟಗಳ ಮೂಲಕ ಹೊಸ ತಲೆಮಾರಿನ ಯುವಕರನ್ನು ಬರವಣಿಗೆಗೆ ಸಜ್ಜುಗೊಳಿಸುವುದು ಅಗತ್ಯವಿದೆ. ಉತ್ತಮ ಓದುಗರಿಂದ ಮಾತ್ರ ಮೌಲ್ಯಯುತ ಪುಸ್ತಕಗಳು ಹೊರಬರಲು ಸಾಧ್ಯ ಎಂದು ತಿಳಿಸಿದರು.

ನಿವೃತ್ತ ಪ್ರಾಚಾರ್ಯ ಮುಹಮ್ಮದ್ ನಿಜಾಮುದ್ದೀನ್ ಮಾತನಾಡಿ, ಓದುವ ಹವ್ಯಾಸವು ಮನಸ್ಸಿನ ಏಕಾಗ್ರತೆ, ನೆಮ್ಮದಿ ಹಾಗೂ ಜ್ಞಾನವನ್ನು ವೃದ್ಧಿಸುತ್ತದೆ. ಎಲ್ಲೆಡೆ ಮನೆಗೊಂದು ಪುಸ್ತಕಾಲಯವಾಗಬೇಕು. ಉತ್ತಮ ವ್ಯಕ್ತಿತ್ವ ವಿಕಸನಕ್ಕೆ ನಿರಂತರ ಅಧ್ಯಯನ ಅಗತ್ಯವಿದೆ ಎಂದು ನುಡಿದರು.

ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿಯ ಸಂಚಾಲಕ ಬಾಲಾಜಿ ಕುಂಬಾರ್ ಮಾತನಾಡಿ, ಪುಸ್ತಕಗಳು ನಮ್ಮ ಉತ್ತಮ ಸ್ನೇಹಿತರಿದ್ದಂತೆ. ಎಲ್ಲರ ಮನೆಯಲ್ಲಿ ದೇವರ ಕೋಣೆ ಇರುವಂತೆ ಗ್ರಂಥಾಲಯ ನಿರ್ಮಾಣಕ್ಕೂ ಜಾಗ ಮೀಸಲಿಡಬೇಕು ಎಂದು ತಿಳಿಸಿದರು.

ಸಾಹಿತಿ ನಾಗಶೆಟ್ಟಿ ಪಾಟೀಲ್ ಗಾದಗಿ ಮಾತನಾಡಿ, ಆಧುನಿಕ ತಂತ್ರಜ್ಞಾನದ ನಡುವೆಯೂ ಪುಸ್ತಕ ಓದುವ ಅಭ್ಯಾಸ ಅಗತ್ಯವಿದೆ. ಪ್ರತಿದಿನ ಸ್ವಲ್ಪ ಸಮಯವನ್ನು ಓದಿಗೆ ಮೀಸಲಿಡಬೇಕು ಎಂದರು.

ಕಾರ್ಯಕ್ರಮದಲ್ಲಿ ಆಯೋಜಿಸಿದ್ದ ಕವಿಗೋಷ್ಠಿಯಲ್ಲಿ ಕವಿಗಳಾದ ಜಗದೀಶ್ವರ್ ಬಿರಾದಾರ್, ಅಶ್ವಜೀತ್ ದಂಡೀನ್, ಚನ್ನಬಸವ ಭೂರೆ, ತುಕಾರಾಮ್ ರಾಜನಾಳೆ, ಎಚ್.ಬಿ. ಪ್ರಿಯಾಂಕಾ, ಉಮಾಕಾಂತ್ ವಿಳಾಸಪುರೆ, ಸುಜಾತಾ ಹೊಸಮನಿ ಹಾಗೂ ಅವಿನಾಶ್ ಸೋನೆ ಸ್ವರಚಿತ ಕವಿತೆಗಳನ್ನು ವಾಚಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಶಂಭುಲಿಂಗ ವಾಲ್ದೊಡ್ಡಿ, ಆರ್.ಎಸ್. ಬಿರಾದರ್ ನಿರಂಹಕಾರ ಬಂಡಿ ಹಾಗೂ ಲಕ್ಷ್ಮಣ್ ಮೇತ್ರೆ ಸೇರಿದಂತೆ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಂದ ರಾಜ್ಯ ಎನ್‌ಎಸ್‌ಎಸ್ ಪ್ರಶಸ್ತಿ ಸ್ವೀಕರಿಸಿದ ನಾಗರಾಜ

ದೇವನಾಂಪ್ರಿಯ ಕಾಲೇಜಿನಲ್ಲಿ ಸಿಬ್ಬಂದಿ-ವಿದ್ಯಾರ್ಥಿಗಳಿಂದ ಅಭಿನಂದನೆ

ಶಿವಕುಮಾರ ಅವರಿಂದ ಸ್ವೀಕರಿಸಿ ಮಹಾವಿದ್ಯಾಲಯಕ್ಕೆ ಹೆಮ್ಮೆ ತಂದಿದ್ದಾರೆ. ಈ ಹಿನ್ನೆಲೆಯಲ್ಲಿ ಮಹಾವಿದ್ಯಾಲಯದ ವತಿಯಿಂದ ಇಂದು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಸಮ್ಮುಖದಲ್ಲಿ ನಾಗರಾಜ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ವತಿಯಿಂದ ಪ್ರೊ. ಜಿ. ಬಿ. ಶಿವರಾಜು ಅವರ ಹೆಸರಿನಲ್ಲಿ ಸ್ಥಾಪಿಸಿರುವ ರಾಜ್ಯದ ಉತ್ತಮ ರಾಷ್ಟ್ರೀಯ ಸೇವಾ ಯೋಜನೆ ಸ್ವಯಂಸೇವಕ ಪ್ರಶಸ್ತಿ2026 ಕ್ಕೆ ನಾಗರಾಜ ಅವರು ಆಯ್ಕೆಯಾಗಿದ್ದರು. ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಅವರು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ರಾಜ್ಯಮಟ್ಟದ ಈ ಪ್ರತಿಷ್ಠಿತ ಗೌರವವನ್ನು ಪಡೆದಿರುವುದು ಮಸ್ಕಿ ದೇವನಾಂಪ್ರಿಯ ಕಾಲೇಜಿನ ಪಾಲಿಗೆ ಹೆಮ್ಮೆಯ ಸಂಗತಿಯಾಗಿದೆ.

ಪ್ರಶಸ್ತಿ ಸ್ವೀಕರಿಸಿ ಕಾಲೇಜಿಗೆ ಆಗಮಿಸಿದ ನಾಗರಾಜ ಅವರನ್ನು ಇಂದು ಮಹಾವಿದ್ಯಾಲಯದ ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೂವಿನ ಸಿಂಚನದ ಮೂಲಕ ನಾಗರಾಜ ಅವರನ್ನು ಅಭಿನಂದಿಸಿ ಹರ್ಷವನ್ನು ಅವರು ವ್ಯಕ್ತಪಡಿಸಿದರು.

ಅವರ ಸಾಧನೆಯನ್ನು ಶ್ಲಾಘಿಸಿ, ಮುಂದಿನ ಶೈಕ್ಷಣಿಕ ಹಾಗೂ ಸಾಮಾಜಿಕ ಬದುಕಿನಲ್ಲಿ ಇನ್ನಷ್ಟು ಯಶಸ್ಸು ಸಾಧಿಸಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಡಾ. ಮಹಾಂತಗೌಡ ಪಾಟೀಲ್,ಅವರು ಹರ್ಷ ವ್ಯಕ್ತಪಡಿಸಿ, ನಾಗರಾಜ ಅವರು ರಾಜ್ಯಮಟ್ಟದ ಪ್ರತಿಷ್ಠಿತ ಎನ್‌ಎಸ್‌ಎಸ್ ಪ್ರಶಸ್ತಿ ಪಡೆಯುವ ಮೂಲಕ ಕಾಲೇಜಿನ ಹೆಮ್ಮೆ ಹಾಗೂ ಕೀರ್ತಿಯನ್ನು ಇಡೀ ರಾಜ್ಯದಲ್ಲಿ ಪಸರಿಸುವಂತೆ ಮಾಡಿದ್ದಾರೆ ಎಂದು ಹೇಳಿದರು. ನಾಗರಾಜ ಅವರಿಗೆ ಅಭಿನಂದನೆ ಸಲ್ಲಿಸಿದ ಅವರು, ಈ ಸಾಧನೆಗೆ ಸಹಕಾರ ನೀಡಿದ ಕಾಲೇಜಿನ ಸಿಬ್ಬಂದಿ ವರ್ಗಕ್ಕೂ ಅಭಿನಂದನೆಗಳನ್ನು ಸಲ್ಲಿಸಿದರು.

ಗಾಂಧಿ ವಿಚಾರ ಸಂಸ್ಕಾರ ಪರೀಕ್ಷೆಯ ಸಂಯೋಜಕರಾದ ಆಶಾ ಸಿ.ಅವರು ಮಾತನಾಡಿ, ನಾಗರಾಜ ಅವರು ರಾಜ್ಯಮಟ್ಟದ ಪ್ರಶಸ್ತಿ ಪಡೆಯುವ ಮೂಲಕ ಕಾಲೇಜಿನ ಸಮಸ್ತ ಶಿಕ್ಷಕರ ಗೌರವವನ್ನು ಹೆಚ್ಚಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಪ್ರತಿಯೊಬ್ಬ ವಿದ್ಯಾರ್ಥಿಯೂ ಜ್ಞಾನದೊಂದಿಗೆ ಮೌಲ್ಯ ಮತ್ತು ಸಂಸ್ಕಾರಗಳನ್ನು ಬೆಳೆಸಿಕೊಂಡು ಸಮಾಜಮುಖಿಯಾಗಿ ಕಾರ್ಯನಿರ್ವಹಿಸಿದಾಗ ಎಲ್ಲರ ಮೆಚ್ಚುಗೆಗೆ ಪಾತ್ರರಾಗುವುದರಲ್ಲಿ ಎರಡು ಮಾತಿಲ್ಲ ಎಂದು ತಿಳಿಸಿದರು.

ನಾಗರಾಜ ಅವರ ಸಾಧನೆಯು ಎಲ್ಲಾ ವಿದ್ಯಾರ್ಥಿಗಳಿಗೆ ಆದರ್ಶವಾಗಿದ್ದು, ಮುಂದಿನ ದಿನಗಳಲ್ಲಿ ಅವರು ಇನ್ನೂ ಹೆಚ್ಚಿನ ಶಿಖರಗಳನ್ನು ಏರಲಿ ಎಂದು ಶುಭ ಹಾರೈಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸಹಪ್ರಾಧ್ಯಾಪಕರಾದ ರಾಮಣ್ಣ, ಡಾ. ಬಸವರಾಜ ತಡಕಲ, ಸಹಾಯಕ ಪ್ರಾಧ್ಯಾಪಕರಾದ ಯಾಳಗಿ ಶ್ರೀನಿವಾಸ, ಇಮಾಮ ಸಾಬ, ಸಣ್ಣಪ್ಪ, ಹಾಜಿ ಬಾಬಾ, ಡಾ. ವಿರುಪನಗೌಡ, ಸೇರಿದಂತೆ ಉಪನ್ಯಾಸಕ ಬಳಗ ಹಾಗೂ ಬೋಧಕೇತರ ಸಿಬ್ಬಂದಿಗಳಾದ ಗಿರಿಜಮ್ಮ, ಗಂಗಮ್ಮ, ಸಲೀಂ, ಸೀತಪ್ಪ ಮತ್ತು ಬಸವರಾಜ, ಅವರು ಉಪಸ್ಥಿತರಿದ್ದು, ನಾಗರಾಜ ಅವರ ಸಾಧನೆಯನ್ನು ಅಭಿನಂದಿಸಿ ಶುಭ ಹಾರೈಸಿದರು.

ನಾಗರಾಜ ಅವರ ಈ ಸಾಧನೆಯು ಅವರ ವೈಯಕ್ತಿಕ ಗೌರವದ ಜೊತೆಗೆ,ಮಸ್ಕಿಯ ದೇವನಾಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಚಟುವಟಿಕೆಗಳು, ಸೇವಾ ಮನೋಭಾವ ಹಾಗೂ ಸಮಾಜಮುಖಿ ಕಾರ್ಯಗಳಿಗೆ ಸಂದ ಗೌರವವೂ ಆಗಿದೆ. ರಾಜ್ಯಮಟ್ಟದ ಪ್ರತಿಷ್ಠಿತ ಪ್ರಶಸ್ತಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಂದ ಸ್ವೀಕರಿಸಿರುವ ನಾಗರಾಜ ಅವರ ಸಾಧನೆಯು ಕಾಲೇಜಿನ ಇತರ ವಿದ್ಯಾರ್ಥಿಗಳಿಗೂ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಹೊಸ ಸ್ಫೂರ್ತಿಯನ್ನು ನೀಡಿದೆ.

ರಾತ್ರಿಯೂ ಬೆಳೆ ಹಾನಿ ಸಮೀಕ್ಷೆ ನಡೆಸಿದ ಕೇಂದ್ರ ಬರ ಅಧ್ಯಯನ ತಂಡ

ಪರಿಸ್ಥಿತಿ ಹಾಗೂ ಬೆಳೆ ಹಾನಿಯನ್ನು ವೀಕ್ಷಿಸಿತ್ತು. ಬಳಿಕ ದೇವದುರ್ಗದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬರದಿಂದ ಉಂಟಾಗಿರುವ ಹಾನಿಯ ಕುರಿತು ಮಾಹಿತಿ ಪಡೆದುಕೊಂಡಿತ್ತು.

ಭಾರತ ಸರ್ಕಾರದ ವೆಚ್ಚ ಇಲಾಖೆಯ ಅಧೀನ ಕಾರ್ಯದರ್ಶಿ ಪಾರ್ಥ ಪಾಲ್ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯ ಅಧೀನ ಕಾರ್ಯದರ್ಶಿ ರಾಕೇಶ್ ಕುಮಾರ್ ತಂಡದಲ್ಲಿದ್ದರು. ಜಿಲ್ಲೆಯಲ್ಲಿ ಆಗಿರುವ ಮಳೆಯ ಪ್ರಮಾಣ, ಮಳೆ ಕೊರತೆಯಿಂದ ಬೆಳೆಗಳಿಗೆ ಉಂಟಾಗಿರುವ ಹಾನಿ, ತೋಟಗಾರಿಕೆ ಬೆಳೆಗಳ ಸ್ಥಿತಿ ಹಾಗೂ ಜಾನುವಾರುಗಳಿಗೆ ಎದುರಾಗಿರುವ ಸಮಸ್ಯೆಗಳ ಕುರಿತು ಕೃಷಿ, ತೋಟಗಾರಿಕೆ ಮತ್ತು ಪಶುಪಾಲನಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಕೇಂದ್ರ ತಂಡ ಮಾಹಿತಿ ಸಂಗ್ರಹಿಸಿತ್ತು.

ಬರ ಪರಿಹಾರ-ಭೂ ಹಕ್ಕಿಗಾಗಿ ರೈತರ ಅಹೋರಾತ್ರಿ ಧರಣಿ

94, 94 ಅಡಿಯಲ್ಲಿ ಅರ್ಜಿ ಸಲ್ಲಿಸಿದವರಿಗೆ ನಿವೇಶನ ಹಕ್ಕುಪತ್ರ ನೀಡಬೇಕು. 40-50 ವರ್ಷಗಳಿಂದ ಸರ್ಕಾರಿ ಭೂಮಿಯಲ್ಲಿ ವಾಸ ಹಾಗೂ ಸಾಗುವಳಿ ಮಾಡುತ್ತಿರುವ ಅರ್ಹ ಬಡವರು ಮತ್ತು ರೈತರನ್ನು ಗುರುತಿಸಿ ಕಾನೂನುಬದ್ಧವಾಗಿ ಹಕ್ಕು ಕಲ್ಪಿಸಬೇಕು ಎಂದು ಒತ್ತಾಯಿಸಲಾಗಿದೆ.

ಜಿಲ್ಲೆಯ ಗ್ರಾಮಗಳಲ್ಲಿ ಸ್ಮಶಾನ, ಗೋಶಾಲೆ ಹಾಗೂ ಮೇವಿನ ಕೇಂದ್ರಗಳ ಕೊರತೆ ನೀಗಿಸಬೇಕು. ಅಂತರ್ಜಲ ಬತ್ತಿರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ರೈತರು, ಕಾರ್ಮಿಕರು, ಮಹಿಳೆಯರು, ಯುವಕರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳನ್ನು ಒಳಗೊಂಡ ಪಂಚಾಯಿತಿ ಮಟ್ಟದ ಬರ ನಿರ್ವಹಣಾ ಸಮಿತಿಗಳನ್ನು ರಚಿಸಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಸಿರವಾರ, ಮಾನ್ವಿ, ಸಿಂಧನೂರು, ಮಸ್ಕಿ ಹಾಗೂ ಲಿಂಗಸುಗೂರು ತಾಲೂಕುಗಳ ವಿವಿಧ ಗ್ರಾಮಗಳ ಭೂರಹಿತರಿಗೆ ಸರ್ಕಾರಿ ಹೆಚ್ಚುವರಿ ಭೂಮಿ ಮತ್ತು ನಿವೇಶನ ಹಕ್ಕುಪತ್ರ ನೀಡುವುದು ಸೇರಿದಂತೆ ಒಟ್ಟು 24 ಪ್ರಮುಖ ಬೇಡಿಕೆಗಳನ್ನು ಸರ್ಕಾರದ ಮುಂದಿಡಲಾಗಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ರಮೇಶ್ ಪಾಟೀಲ್ ಭೇರಿ, ಜಿಲ್ಲಾ ಕಾರ್ಯದರ್ಶಿ ಹುಲಿಗಪ್ಪ ಶಿರವಾರ ಹಾಗೂ ಜಿಲ್ಲಾಧ್ಯಕ್ಷ ಅಶೋಕ ನೀಲಗಲ್ ಎಚ್ಚರಿಸಿದ್ದಾರೆ.

ಮಸ್ಕಿ ರೈತ ಸಂಪರ್ಕ ಕೇಂದ್ರದಲ್ಲಿ ಕಡಲೆ ಬೀಜ ವಿತರಣೆ

ಅಧ್ಯಕ್ಷರು ವಿಜಯ ಬಡಿಗೇರ ರೈತ ಸಂಘದ ಮುಖಂಡ ಅಲಮಪ್ಪ ಹಾಗೂ ರೈತ ಸಂಪರ್ಕ ಕೇಂದ್ರದ ಸಿಬ್ಬಂದಿಗಳಾದ ಸಿದ್ದರಾಮೇಶ್ವ, ಪ್ರಸಾದ,ರಮೇಶ ಹಾಗೂ ರೈತರು ಇದ್ದರು.

4 ಸಮುದಾಯ ಎಸ್ಸಿ ಪಟ್ಟಿಯಿಂದ ಕೈಬಿಡಲು ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ

ಸರ್ಕಾರಗಳಿಗೆ ನೋಟಿಸ್ ನೀಡಿತ್ತು ಎಂದು ತಿಳಿಸಿದರು.

2026ರ ಸೆಪ್ಟೆಂಬರ್ 30ರಂದು ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ತನ್ನ ವರದಿಯನ್ನು ಸಲ್ಲಿಸುವಂತೆ ಹೈಕೋರ್ಟ್ ಸೂಚಿಸಿದೆ. ಮುಂದಿನ ಕಾನೂನು ಪ್ರಕ್ರಿಯೆಯಲ್ಲಿ ತಮ್ಮ ಬೇಡಿಕೆಗೆ ನ್ಯಾಯ ದೊರೆಯುವ ವಿಶ್ವಾಸವಿದೆ ಎಂದು ಅವರು ಹೇಳಿದರು.

ಲಂಬಾಣಿ, ಭೋವಿ, ಕೊರಚ ಮತ್ತು ಕೊರಮ ಸಮುದಾಯಗಳನ್ನು ಪರಿಶಿಷ್ಟ ಜಾತಿಗಳ ಪಟ್ಟಿಯಿಂದ ಕೈಬಿಡಲಾಗುತ್ತದೆ ಎಂಬುದು ತಮ್ಮ ನಿರೀಕ್ಷೆಯಾಗಿದ್ದು, ಈ ಸಂಬಂಧ ಕಾನೂನು ಹೋರಾಟವನ್ನು ಮುಂದುವರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಜನತಾ ರಕ್ಷಣಾ ಸೇನೆಯ ರಾಜ್ಯಾಧ್ಯಕ್ಷ ಹುಸೇನ್ ಬಾಷಾ ಪಲಕನಮರಡಿ ಇದ್ದರು.

ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಕಾಂಗ್ರೆಸ್ ಸರ್ಕಾರದಿಂದ ನಿರ್ಲಕ್ಷ್ಯ : ರಘು ಆರೋಪ

ಹಾಗೂ ಅಕ್ರಮ ಮತದಾರರ ವಿರುದ್ಧ ಬಿಜೆಪಿಯ ಹೋರಾಟ ನಿರಂತರವಾಗಿ ಮುಂದುವರಿಯಲಿದೆ. ಕಾಂಗ್ರೆಸ್‌ನ ಆರೋಪಗಳಿಗೆ ಬಿಜೆಪಿ ಹೆದರುವುದಿಲ್ಲ ಎಂದು ಹೇಳಿದರು. ಈ ಸಂದರ್ಭದಲ್ಲಿ

ಬಿಜೆಪಿ ಒಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ವಿಷ್ಣುವರ್ಧನ್ ರೆಡ್ಡಿ ದಿನ್ನಿ, ಜಿಲ್ಲಾ ವಕ್ತಾರ ಸಿದ್ದನಗೌಡ ನೆಲಹಾಳ್, ನರಸಪ್ಪ ಯಾಕ್ಲಾಸಪುರ, ವೆಂಕಟೇಶ್ ಉಪ್ಪಾರ ಹಾಗೂ ಬಸವರಾಜ್ ಉಪಸ್ಥಿತರಿದ್ದರು.

ಅ.7ರಿಂದ ಯಾದಗಿರಿಯಲ್ಲಿ ರಾಜ್ಯಮಟ್ಟದ ಟೇಕ್ವಾಂಡೋ ಪಂದ್ಯಾವಳಿ



ಯಾದಗಿರಿ,ಅ.05-

ಶಾಲಾ ಶಿಕ್ಷಣ ಇಲಾಖೆಯ 2026-27ನೇ ಸಾಲಿನ ರಾಜ್ಯಮಟ್ಟದ ಬಾಲಕ, ಬಾಲಕಿಯರ ಟೇಕ್ವಾಂಡೋ ಪಂದ್ಯಾವಳಿಯನ್ನು ಅಕ್ಟೋಬರ್ 7ರಿಂದ 9ರವರೆಗೆ ನಗರದ ಡಾನ್ ಬಾಸ್ಕೋ ಶಾಲೆಯಲ್ಲಿ ಆಯೋಜಿಸಲಾಗಿದೆ. ಸಂಬಂಧಿಸಿದ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಜ್ಯಮಟ್ಟದ ಟೇಕ್ವಾಂಡೋ ಪಂದ್ಯಾವಳಿ ಆಯೋಜನೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜ್ಯದ 35 ಶೈಕ್ಷಣಿಕ ಜಿಲ್ಲೆಗಳಿಂದ ಸುಮಾರು 760 ವಿದ್ಯಾರ್ಥಿಗಳು ಈ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ. ವಿದ್ಯಾರ್ಥಿಗಳಿಗೆ ಸೂಕ್ತ ವಸತಿ, ಆಹಾರ, ವಾಹನಗಳ ವ್ಯವಸ್ಥೆ, ಸುರಕ್ಷತಾ ಕ್ರಮುಗಳು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಅಚ್ಚುಕಟ್ಟಾಗಿ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇಂಡೋರ್ ಸ್ಟೇಡಿಯಂಗೆ ಡಾನ್ ಬಾಸ್ಕೋ ಶಾಲೆಯ ಮೇಲಿನ ಸಭಾಂಗಣವನ್ನು ಬಳಸಲು ಉದ್ದೇಶಿಸಲಾಗಿದೆ. ಮಕ್ಕಳ ವಾಸ್ತವ್ಯಕ್ಕಾಗಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕ್ರೀಡಾ ವಸತಿನಿಲಯಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ವಸತಿನಿಲಯಗಳ ವ್ಯಾಪ್ತಿಯಲ್ಲಿ ಸ್ವಚ್ಛತೆಗೆ ವಿಶೇಷ ಗಮನ ನೀಡಬೇಕು. ರೆಫರಿಗಳಿಗಾಗಿ ಹಳೆಯ ಐ.ಬಿ. ಸೇರಿದಂತೆ ಸುಸಜ್ಜಿತ ವಸತಿ ವ್ಯವಸ್ಥೆ ಕಲ್ಪಿಸಬೇಕು ಎಂದು ಸೂಚಿಸಿದರು.

ಪಂದ್ಯಾವಳಿಯ ನಿರ್ವಹಣೆಗೆ ಸ್ವಾಗತ ಸಮಿತಿ, ಆಹಾರ ಸಮಿತಿ, ವಸತಿ ಸಮಿತಿ, ಆರೋಗ್ಯ ನಿರ್ವಹಣಾ ಸಮಿತಿ, ಸಾರಿಗೆ ಸಮಿತಿ, ವಿದ್ಯುತ್ ಸೇರಿದಂತೆ ಅಗತ್ಯ ಸಮಿತಿಗಳನ್ನು ರಚಿಸಲಾಗುತ್ತಿದೆ. ಎಲ್ಲ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ಯಾವುದೇ ಲೋಪಕ್ಕೆ ಅವಕಾಶ ನೀಡದೆ ವ್ಯವಸ್ಥಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ರಮೇಶ್ ಕೋಲಾರ ಸೂಚಿಸಿದರು. ಸಭೆಯಲ್ಲಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ ಅವರು, ರಾಜ್ಯಮಟ್ಟದ ಟೇಕ್ವಾಂಡೋ ಸ್ಪರ್ಧೆಯಲ್ಲಿ 14 ವರ್ಷ ವಯೋಮಾನದ ಬಾಲಕ, ಬಾಲಕಿಯರು ಅಕ್ಟೋಬರ್ 7ರಂದು ಬೆಳಿಗ್ಗೆ 9 ಗಂಟೆಗೆ ವರದಿ ಮಾಡಿಕೊಳ್ಳಬೇಕು. ಅಂದು ಮಧ್ಯಾಹ್ನ 12 ಗಂಟೆಗೆ ತೂಕ ಪರಿಶೀಲನೆ ನಡೆಯಲಿದೆ. 17 ವರ್ಷ ವಯೋಮಾನದೊಳಗಿನ ಬಾಲಕ, ಬಾಲಕಿಯರು ಅಕ್ಟೋಬರ್ 8ರಂದು ವರದಿ ಮಾಡಿಕೊಳ್ಳಬೇಕು ಹಾಗೂ ಮಧ್ಯಾಹ್ನ 12 ಗಂಟೆಗೆ ತೂಕ ಪರಿಶೀಲನೆ ನಡೆಯಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಜೇವರ್ಗಿಯ ಎರಡು ಬಡಾವಣೆಗಳಲ್ಲಿ ಕಳ್ಳರ ಹಾವಳಿ: ಪೊಲೀಸ್ ಭದ್ರತೆಗೆ ಆಗ್ರಹ

ಜೇವರ್ಗಿ,ಅ.05-

ಪಟ್ಟಣದ ತಾರಾನಗರ ಹಾಗೂ ಮಹಾಲಕ್ಷ್ಮಿ ಬಡಾವಣೆಗಳಲ್ಲಿ ಕಳೆದ ಎರಡು ತಿಂಗಳಿಂದ ಕಳ್ಳರ ಹಾವಳಿ ಮಿತಿಮೀರಿದ್ದು, ಸಾರ್ವಜನಿಕರಲ್ಲಿ ತೀವ್ರ ಭಯ ಹಾಗೂ ಆತಂಕದ ವಾತಾವರಣ ನಿರ್ಮಾಣವಾಗಿದೆ. ಸರಣಿ ಕಳ್ಳತನ ಹಾಗೂ ಕಳ್ಳತನದ ವಿಫಲ ಯತ್ನಗಳಿಗೆ ಕೂಡಲೇ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿ ಎರಡೂ ಬಡಾವಣೆಗಳ ನಿವಾಸಿಗಳು ಜೇವರ್ಗಿ ಪೊಲೀಸ್ ಠಾಣೆಗೆ ತೆರಳಿ ಪೊಲೀಸ್ ಅಧಿಕಾರಿಗಳಿಗೆ ಜಂಟಿ ಮನವಿ ಸಲ್ಲಿಸಿದರು.

ಕೇವಲ ರಾತ್ರಿ ವೇಳೆಯಲ್ಲದೆ, ಜನಸಾಮಾನ್ಯರು ಓಡಾಡುವ ಹಗಲು ಹೊತ್ತಿನಲ್ಲಿಯೂ ಸರಣಿ ಕಳ್ಳತನ ಹಾಗೂ ಕಳ್ಳತನದ ವಿಫಲ ಯತ್ನಗಳು ನಡೆಯುತ್ತಿವೆ. ಕಳೆದ ಎರಡು ತಿಂಗಳ ಅವಧಿಯಲ್ಲಿ ಸುಮಾರು 10ರಿಂದ 12 ಬಾರಿ ಕಳ್ಳರು ತಮ್ಮ ಕೈಚಳಕ ತೋರಿಸಿರುವುದು ಸ್ಥಳೀಯ ನಿವಾಸಿಗಳನ್ನು ಆತಂಕಕ್ಕೀಡು ಮಾಡಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕಳ್ಳರ ಹಾವಳಿಯಿಂದಾಗಿ ಬಡಾವಣೆಯ ಸಾರ್ವಜನಿಕರು, ವ್ಯಾಪಾರಿಗಳು, ಉದ್ಯೋಗಿಗಳು ಹಾಗೂ ಮಹಿಳೆಯರು ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆಗೆ ಬೀಗ ಹಾಕಿ ಹೊರಗೆ ಹೋಗಲೂ ಜನರು ಆತಂಕಪಡುವಂತಾಗಿದೆ. ಹೀಗಾಗಿ ಬಡಾವಣೆಗಳಲ್ಲಿ ಪೊಲೀಸ್ ಭದ್ರತೆಯನ್ನು ಬಿಗಿಗೊಳಿಸುವುದು ಅಗತ್ಯವಾಗಿದೆ ಎಂದು ನಿವಾಸಿಗಳು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಪ್ರಮುಖ ವಕೀಲರಾದ ಮಲ್ಲಿಕಾರ್ಜುನ ಸೂಗೂರು, ಅಣವೀರ ಗದ್ದಗಿ, ಶಿಕ್ಷಕರಾದ ಶಿವಲಿಂಗಪ್ಪ, ಸಿದ್ದು ಪೂಜಾರಿ, ವೀರೇಶ ಹಳ್ಳಿ, ಅನಿಲ್ ಯಾಳವಾರ್ ಸಿದ್ದು ಯಾಳವಾರ್ ಈರಣ್ಣ ನರಬೋಳಿ, ಸಕ್ರಪ್ಪ ಪೂಜಾರಿ, ವೀರೇಶ ಹಿರೇಮಠ, ನಾಗರಾಜ ವಿ.ಟಿ., ರಾಜು ಮುದ್ದಡಗಿ ಸೇರಿದಂತೆ ತಾರಾನಗರ ಹಾಗೂ ಮಹಾಲಕ್ಷ್ಮಿ ಬಡಾವಣೆಯ ಹಲವಾರು ಪ್ರಮುಖ ನಾಗರಿಕರು ಉಪಸ್ಥಿತರಿದ್ದರು.



ಹುಲಸೂರು ಕೇಬಲ್ ವೈರ್ ಕಳವು ಪ್ರಕರಣ: ಇಬ್ಬರ ಬಂಧನ

ಹುಲಸೂರು,ಅ.05-

ಮಾಂಜ್ರಾ ನದಿ ದಡದಲ್ಲಿ ನೀರಿನ ಮೋಟಾರ್‌ಗಳಿಗೆ ಅಳವಡಿಸಿದ್ದ ಕೇಬಲ್ ವೈರ್‌ಗಳನ್ನು ಕಳವು ಮಾಡಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಮೇಹಕರ್ ಪೊಲೀಸ್ ಠಾಣೆಯ ಪೊಲೀಸರು ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ. ಆರೋಪಿಗಳಿಂದ 1,090 ಮೀಟರ್ ಕೇಬಲ್ ವೈರ್ ಹಾಗೂ ಕೃತ್ಯಕ್ಕೆ ಬಳಸಿದ್ದ ಇಕೋ ವಾಹನವನ್ನು ಜಪ್ತಿ ಮಾಡಲಾಗಿದೆ.

ಬಂಧಿತ ಆರೋಪಿಗಳನ್ನು ನಿಲಂಗಾ ಮೂಲದ ಸಚಿನ್ ಹಾಗೂ ಯಶವಂತ್ ಎಂದು ಗುರುತಿಸಲಾಗಿದೆ.

ಸೆ.14ರಂದು ಕೊಂಗಳಿ ಗ್ರಾಮದ ಹೊಲದಲ್ಲಿ 350 ಮೀಟರ್, ಸೆ.21ರಂದು ಹಲಸಿತುಗಾಂವ್ ಗ್ರಾಮದ ಹೊಲದಲ್ಲಿ 365 ಮೀಟರ್ ಹಾಗೂ ಸೆ.25ರಂದು ವಾಂಜರಖೇಡ ಗ್ರಾಮದ ಹೊಲದಲ್ಲಿ 195 ಮೀಟರ್ ಕೇಬಲ್ ವೈರ್ ಕಳವು ಮಾಡಲಾಗಿತ್ತು. ಈ ಕುರಿತು ಮೇಹಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳು ದಾಖಲಾಗಿದ್ದವು.

ಪ್ರಕರಣಗಳ ತನಿಖೆ ಕೈಗೊಂಡ ಪೊಲೀಸರು ಶನಿವಾರ (ಅ.3) ಆರೋಪಿಗಳನ್ನು ಬಂಧಿಸಿದ್ದಾರೆ. ಮೂರು ಪ್ರಕರಣಗಳಿಗೆ ಸಂಬಂಧಿಸಿದಂತೆ ಅಂದಾಜು 1.80 ಲಕ್ಷ ರೂ. ಮೌಲ್ಯದ ಒಟ್ಟು 1,090 ಮೀಟರ್ ಕೇಬಲ್ ವೈರ್ ಹಾಗೂ 5 ಲಕ್ಷ ರೂ. ಮೌಲ್ಯದ ಕೃತ್ಯಕ್ಕೆ ಬಳಸಿದ್ದ ಇಕೋ ವಾಹನವನ್ನು ಜಪ್ತಿ ಮಾಡಿದ್ದಾರೆ.

ಎಸ್ಪಿ ಪ್ರದೀಪ್ ಗುಂಟಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರಿ, ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ಹಾಗೂ ಸಿಪಿಐ ಹಣಮರೆಡ್ಡೆಪ್ಪ ಅವರ ಮಾರ್ಗದರ್ಶನದಲ್ಲಿ ಮೇಹಕರ್ ಠಾಣೆಯ ಪಿಎಸ್‌ಐ ಸುದರ್ಶನರೆಡ್ಡಿ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದರು.

ಎಚ್‌ಐವಿ ಬಾಧಿತರು ಭಯಪಡದೆ ನಿಯಮಿತ ಔಷಧ ಸೇವಿಸಿ: ಸುಬ್ಬಯ್ಯ ಗುತ್ತೇದಾರ



ಬೀದರ್,ಅ.05-

ಎಚ್‌ಐವಿ ಬಾಧಿತರು ಯಾವುದೇ ರೀತಿಯ ಭಯ, ಆತಂಕಕ್ಕೆ ಒಳಗಾಗದೆ ನಿಯಮಿತವಾಗಿ ಔಷಧ ಸೇವಿಸಬೇಕು. ರೋಗ ನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳಲು ದೈನಂದಿನ ಸಮತೋಲಿತ ಆಹಾರದ ಜೊತೆಗೆ ವ್ಯಾಯಾಮವನ್ನು ರೂಢಿಸಿಕೊಳ್ಳಬೇಕು ಎಂದು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಮೀಟೋ ಅಧಿಕಾರಿ ಸುಬ್ಬಯ್ಯ ಗುತ್ತೇದಾರ ಹೇಳಿದರು.

ನಗರದ ಡಿಎಚ್‌ಒ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಬೆಂಗಳೂರು, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಬೀದರ್ ಹಾಗೂ ಲಾಲ್ ಬಹದ್ದೂರ್ ಶಿಕ್ಷಣ ಸಂಸ್ಥೆಯ ಸಿಎಸ್‌ಸಿ ಯೋಜನೆ, ಬೀದರ್ ವತಿಯಿಂದ ಆಯೋಜಿಸಿದ್ದ ಪಿಎಲ್‌ಎಚ್‌ಐವಿ ಅನುಭವ ಹಂಚಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಯಾವುದೇ ರೀತಿಯ ಕಳಂಕ ಮತ್ತು ಅಸಮಾನತೆಯನ್ನು ಎದುರಿಸಿದರೆ, ಅದಕ್ಕೆ ಲಭ್ಯವಿರುವ ಉಚಿತ ಕಾನೂನು ನೆರವನ್ನು ಕೂಡ ಪಡೆಯಬಹುದಾಗಿದೆ ಎಂದರು.

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಜಿಲ್ಲಾ ಮೇಲ್ವಿಚಾರಕ ಸೂರ್ಯಕಾಂತ್ ಸಂಗೊಳಕರ್ ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬರೂ ಉತ್ತಮ ರೀತಿಯಲ್ಲಿ ಜೀವನ ನಡೆಸಲು ಅವಕಾಶವಿದೆ. ಎಚ್‌ಐವಿಗೆ ಒಳಪಟ್ಟವರು ಯಾವುದೇ ಮುಜುಗರಕ್ಕೆ ಒಳಗಾಗದೆ ಧೈರ್ಯದಿಂದ ಜೀವನ ನಡೆಸಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಭಿವೃದ್ಧಿ ನಿರೀಕ್ಷಕಿ ಯಲ್ಲಮ್ಮ ಮಾತನಾಡಿ, ಸರ್ಕಾರದ ಕಲ್ಯಾಣ ಯೋಜನೆಗಳು, ಅರ್ಹತೆ ಹಾಗೂ ಆರ್ಥಿಕ ಮತ್ತು ಸಾಮಾಜಿಕ ಯೋಜನೆಗಳ ಪ್ರಯೋಜನ ಪಡೆದುಕೊಳ್ಳುವ ಮೂಲಕ ಸ್ವಾವಲಂಬಿ ಬದುಕು ಸಾಗಿಸಲು ಮುಂದಾಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎಆರ್‌ಟಿ ವೈದ್ಯಾಧಿಕಾರಿ ಡಾ. ಮಹೇಶ್ ರೆಡ್ಡಿ, ಕ್ಲಸ್ಟರ್ ಪ್ರಿವೆನ್ಷನ್ ಆಫೀಸರ್ ಶಿವಶಂಕರ್ ಬೆಮಳಗಿ, ಮೊಬಿಲೈಜೇಷನ್ ಫಾರ್ ಏಡ್ಸ್ ಸುರಕ್ಷಾ ಜಿಲ್ಲಾ ಸಹಯೋಗಿ ವಿಶ್ವನಾಥ್ ಸ್ವಾಮಿ, ಎಆರ್‌ಟಿ ಆಪ್ತ ಸಮಾಲೋಚಕ ಸಂತೋಷ್ ಸಿಂಧೆ, ಐಸಿಟಿಸಿ ಆಪ್ತ ಸಮಾಲೋಚಕ ಅರವಿಂದ್ ಕುಲಕರ್ಣಿ ಹಾಗೂ ಸಿಎಸ್‌ಸಿ ಕೋಆರ್ಡಿನೇಟರ್ ಶಿವಕುಮಾರ್ ಮಾಳೆದೊಡ್ಡಿ ಉಪಸ್ಥಿತರಿದ್ದರು.

ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸುವ ಕೆಲಸ ಮಾಡಿ : ರಾಜುಗೌಡ



ಸುರಪುರ,ಅ.05-

ರಾಜ್ಯ ಸರ್ಕಾರ ನಾಡಿನ ಅಭಿವೃದ್ಧಿ ಹಾಗೂ ರೈತರನ್ನು ಸಂಪೂರ್ಣವಾಗಿ ಮರೆತಿದೆ. ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸುವ ಕೆಲಸವನ್ನು ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರು ಮಾಡಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ನರಸಿಂಹ ನಾಯಕ (ರಾಜುಗೌಡ) ಹೇಳಿದರು.

ತಾಲೂಕಿನ ದೇವರಗೋನಾಲ ಗ್ರಾಮದಲ್ಲಿ ನಡೆದ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯ ನೇತೃತ್ವ ವಹಿಸಿ ಮಾತನಾಡಿದ ಅವರು, ಸರ್ಕಾರ ಕೇವಲ ಗ್ಯಾರಂಟಿಗಳ ಹೆಸರನ್ನು ಹೇಳುವುದನ್ನು ಬಿಟ್ಟರೆ ಬೇರೆ ಯಾವುದೇ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿಲ್ಲ ಎಂದು ಆರೋಪಿಸಿದರು.

ರೈತರು ಬರಗಾಲದಿಂದ ತೀವ್ರ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ರೈತರಿಗೆ ಸೂಕ್ತ ಪರಿಹಾರ ನೀಡಲು ಮುಂದಾಗಬೇಕಿದ್ದ ಸರ್ಕಾರ, ಕೇವಲ 2,500 ರೂ. ನೀಡುವುದಾಗಿ ಹೇಳುವ ಮೂಲಕ ರೈತ ವಿರೋಧಿ ಸರ್ಕಾರ ಎಂಬುದನ್ನು ತೋರಿಸುತ್ತಿದೆ ಎಂದು ಟೀಕಿಸಿದರು.

ಸರ್ಕಾರದ ಇಂತಹ ಜನವಿರೋಧಿ ನೀತಿಗಳನ್ನು ಜನಸಾಮಾನ್ಯರಿಗೆ ತಿಳಿಸುವ ಮೂಲಕ ಕ್ಷೇತ್ರದಲ್ಲಿ ಪಕ್ಷ ಸಂಘಟನೆಯನ್ನು ಬೇರು ಮಟ್ಟದಿಂದ ಬಲಪಡಿಸಬೇಕಿದೆ. ಈ ನಿಟ್ಟಿನಲ್ಲಿ ಪಕ್ಷದ ಎಲ್ಲ ಮುಖಂಡರು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಮಾಜಿ ಸದಸ್ಯರು ಜನರ ಬಳಿಗೆ ತೆರಳಿ ಜಾಗೃತಿ ಮೂಡಿಸಬೇಕು. ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಿಗೆ ಪಕ್ಷ ಸಂಘಟನೆಯ ಮೂಲಕ ಸಜ್ಜಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ರಾಜಾ ಹನಮಪ್ಪ ನಾಯಕ (ತಾತಾ),ತಾ.ಪಂ ಮಾಜಿ ಅಧ್ಯಕ್ಷ ದೊಡ್ಡ ಕೊತಲೆಪ್ಪ ಹಾವಿನ್,, ಬಲಭಿಮನಾಯಕ ಬೈರಿಮಡ್ಡಿ ,ನಿಂಗಯ್ಯ ಪೂಜಾರಿ,ಮಲ್ಲಣ್ಣ ಸಾಹುಕಾರ,ಶರಣು ನಾಯಕ ಬೈರಿಮಡ್ಡಿ, ಭೀಮಣ್ಣ ಬೇವಿನಾಳ, ವೆಂಕಟೇಶ ನಾಯಕ ಬೈರಿಮಡ್ಡಿ, ಸಣ್ಣ ದೇಸಾಯಿ ದೇವರಗೋನಾಲ, ದೇವಿಂದ್ರಪ್ಪಗೌಡ ದೇವರಗೋನಾಲ, ನಾನೇಗೌಡ ದೇವರ ಗೋನಾಲ, ಹಣಮಂತ್ರಾಯ ಪೂಜಾರಿ ದೇವರಗೋನಾಲ, ಪ್ರವೀಣ ನಾಯಕ ಡೊಣ್ಣೆಗೇರಾ, ಸೇರಿದಂತೆ ದೇವರ ಗೋನಾಲ ಗ್ರಾ.ಪಂ ಹಾಗೂ ದೇವಿಕೇರಿ ಗ್ರಾ.ಪಂ ಮತ್ತು ಬಾದ್ಯಾಪುರ ಗ್ರಾಮಗಳ ಹಿರಿಯ ಮುಖಂಡರು ಹಾಗೂ ಬಿಜೆಪಿ ನೂರಾರು ಜನ ಕಾರ್ಯಕರ್ತರು ಭಾಗವಹಿಸಿದ್ದರು.

3 ಸಾವಿರ ರೂ. ಲಂಚ ಪಡೆದ ಆರೋಪ: ಸುಲೇಪೇಟ ಠಾಣೆಯ ಕಾನ್‌ಸ್ಟೇಬಲ್ ಲೋಕಾಯುಕ್ತ ಬಲೆಗೆ

ಕಲಬುರಗಿ,ಅ.05-



ಜಾಮೀನು ಪಡೆದ ವ್ಯಕ್ತಿಯ ಹಾಜರಾತಿ ದಾಖಲಿಸುವ ವಿಚಾರದಲ್ಲಿ 3 ಸಾವಿರ ರೂ. ಲಂಚ ಪಡೆದ ಆರೋಪದ ಮೇರೆಗೆ ಸುಲೇಪೇಟ ಪೊಲೀಸ್ ಠಾಣೆಯ ಕಾನ್‌ಸ್ಟೇಬಲ್ ಅನಿಲ್ ಕುಮಾರ್ ಅವರನ್ನು ಕರ್ನಾಟಕ ಲೋಕಾಯುಕ್ತ ಪೊಲೀಸರು ಬಲೆಗೆ ಬೀಳಿಸಿಕೊಂಡಿದ್ದಾರೆ.

ಚಿಂಚೋಳಿ ತಾಲೂಕಿನ ಸುಲೇಪೇಟ ಪೊಲೀಸ್ ಠಾಣೆ ವ್ಯಾಪ್ತಿಯ ಗಡಿಕೇಶ್ವರ ಗ್ರಾಮದ ಚಂದ್ರಕಾಂತ ರಂಗನೂರು ನೀಡಿದ ದೂರಿನ ಆಧಾರದ ಮೇಲೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ. ದೂರುದಾರರು ನ್ಯಾಯಾಲಯದಿಂದ ಜಾಮೀನು ಪಡೆದಿದ್ದು, ಪ್ರತಿತಿಂಗಳು ಸುಲೇಪೇಟ ಪೊಲೀಸ್ ಠಾಣೆಯ ತನಿಖಾಧಿಕಾರಿ ಮುಂದೆ ಹಾಜರಾಗುವಂತೆ ನ್ಯಾಯಾಲಯ ಸೂಚಿಸಿತ್ತು ಎನ್ನಲಾಗಿದೆ. ಆದರೆ ಠಾಣೆಯ ರೈಟರ್ ಆಗಿದ್ದ ಕಾನ್‌ಸ್ಟೇಬಲ್ ಅನಿಲ್ ಕುಮಾರ್ ಅವರು ಪ್ರತಿ ರವಿವಾರ ಠಾಣೆಗೆ ಬಂದು ಹಾಜರಾತಿ ದಾಖಲಿಸಿಕೊಳ್ಳುವಂತೆ ಒತ್ತಾಯಿಸುತ್ತಿದ್ದರು. ಅಲ್ಲದೆ, ಹಾಜರಾಗದಿದ್ದರೆ ಜಾಮೀನು ರದ್ದುಪಡಿಸಿ ಮತ್ತೆ ಜೈಲಿಗೆ ಕಳುಹಿಸುವುದಾಗಿ ಬೆದರಿಕೆ ಹಾಕಿದ್ದರು ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಪೊಲೀಸ್ ಠಾಣೆಗೆ ಪದೇಪದೇ ಅಲೆದಾಡುವುದನ್ನು ತಪ್ಪಿಸಲು ಮಧ್ಯವರ್ತಿಯೊಬ್ಬರ ಮೊಬೈಲ್ ಸಂಖ್ಯೆಗೆ 3 ಸಾವಿರ ರೂ. ಲಂಚದ ಹಣವನ್ನು ಫೋನ್‌ಪೇ ಮೂಲಕ ವರ್ಗಾಯಿಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ದೂರಿನ ಆಧಾರದ ಮೇಲೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಲಂಚದ ಹಣದ ವ್ಯವಹಾರಕ್ಕೆ ಸಂಬಂಧಿಸಿದಂತೆ ಕಾನ್‌ಸ್ಟೇಬಲ್ ಅನಿಲ್ ಕುಮಾರ್ ಅವರನ್ನು ವಶಕ್ಕೆ ಪಡೆದು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ. ಕಲಬುರಗಿ ಪೊಲೀಸ್ ಅಧೀಕ್ಷಕ ಸಿದ್ಧರಾಜು ಸಿ. ಅವರ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಹಾಗೂ ತನಿಖಾಧಿಕಾರಿ ರವಿಕುಮಾರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದ್ದು, ಪ್ರಕರಣದ ಕುರಿತು ತನಿಖೆ ಮುಂದುವರಿದಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ



ರಾಜ್ಯದಲ್ಲಿ ಭ್ರಷ್ಟಾಚಾರದ ಗುತ್ತಿಗೆ : ಬಿಜೆಪಿಯಿಂದ ಕಾಂಗ್ರೆಸ್‌ಗೆ ಹಸ್ತಾಂತರ!

ಕೋಲು ಕೊಟ್ಟು ಹೊಡೆಸಿಕೊಳ್ಳುವುದೆಂದರೆ ಕಾಂಗ್ರೆಸ್‌ಗೆ ಅದೇನು ಖುಷಿಯೊ ಗೊತ್ತಿಲ್ಲ. ಹಾಗಲ್ಲವೆಂದಾಗಿದ್ದರೆ, ಯಾವುದನ್ನು ಹಿಂದಿನ ಬಿಜೆಪಿ ಸರಕಾರದವಿರುದ್ಧ ಅಸ್ತ್ರವಾಗಿಸಿಕೊಳ್ಳಲಾಗಿತ್ತೊಅದೇ ಗುತ್ತಿಗೆದಾರರ ವಿಷಯದಲ್ಲಿ ಸ್ವತಃ ಕಾಂಗ್ರೆಸ್ ಸರಕಾರ ಎಡವುತ್ತಿರಲಿಲ್ಲ. ಮೊನ್ನೆ ಗುತ್ತಿಗೆದಾರರ ಸಂಘ ವಿವಿಧ ಇಲಾಖೆಗಳಿಂದ ಗುತ್ತಿಗೆದಾರರಿಗೆ ಬಾಕಿ ಇರುವ ಹಣ ಬಿಡುಗಡೆಗೆ ಒತ್ತಾಯಿಸಿ ಮತ್ತೊಮ್ಮೆ ಪತ್ರ ಬರೆದ ಬಳಿಕ ಚರ್ಚೆ ದೊಡ್ಡದಾಗುತ್ತಿದೆ. ಬಿಜೆಪಿ ಸರಕಾರದ ಅವಧಿಯಲ್ಲಿದ್ದ ಪರ್ಸೆಂಟೇಜ್ ಈ ಸರಕಾರದಲ್ಲೂ ಮುಂದುವರಿದಿದೆ ಎಂಬ ಆರೋಪದ ಭಾರವೂ ಕಾಂಗ್ರೆಸ್ ಬೆನ್ನಿಗೇರಿದೆ. ಸರಕಾರದಲ್ಲಿನ ಪಾರದರ್ಶಕತೆ ಕೊರತೆಯ ಬಗ್ಗೆ ಆರೋಪಿಸಿರುವ ಗುತ್ತಿಗೆದಾರರ ಸಂಘ, ಲಂಚ ಪಡೆದಿರುವ ಹಾಗೂ ಲಂಚಕ್ಕೆ ಬೇಡಿಕೆ ಇಟ್ಟಿರುವ ಶಾಸಕರ ಹೆಸರನ್ನು ಬಹಿರಂಗಪಡಿಸುವುದಾಗಿಯೂ ಎಚ್ಚರಿಸಿದೆ. ಕೊಡುವಾಗ ಲಂಚ ಕೊಟ್ಟು, ಬಳಿಕ ಅದನ್ನು ಬೆದರಿಕೆಗಾಗಿ ಬಳಸಲಾಗುವ ಆಟದಂತೆ ಇದು ಕಾಣುವುದರಿಂದ, ಪಾರದರ್ಶಕತೆ ಅಲ್ಲಿಯೂ ಇಲ್ಲವೆಂಬ ಅನುಮಾನಕ್ಕೂ ಎಡೆಮಾಡಿಕೊಟ್ಟಿದೆ.

ಗುತ್ತಿಗೆದಾರರ ಸಂಘ ಹೇಳುತ್ತಿರುವ ಪ್ರಕಾರ, ಸರಕಾರದಿಂದ 38 ಸಾವಿರ ಕೋಟಿ ರೂ. ಬಾಕಿ ಇದೆ. ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ 13,000 ಕೋಟಿ ರೂ. ಲೋಕೋಪಯೋಗಿ ಇಲಾಖೆಯಿಂದ 8,370 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ 3,800 ಕೋಟಿ, ರೂ. ಸಣ್ಣ ನೀರಾವರಿ ಇಲಾಖೆಯಿಂದ 3,000 ಕೋಟಿ, ರೂ. ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ 2,600 ಕೋಟಿ, ಕಾರ್ಮಿಕ ಇಲಾಖೆಯಿಂದ 2,000 ಕೋಟಿ, ರೂ. ನಗರಾಭಿವೃದ್ಧಿ ಇಲಾಖೆಯಿಂದ 1,800 ಕೋಟಿ ರೂ. ಬಾಕಿ ಇದೆ ಎಂದು ಗುತ್ತಿಗೆದಾರರ ಸಂಘ ಹೇಳಿದೆ. ಆದರೆ, ಅದು ಕೊಡುತ್ತಿರುವ ಅಂಕಿಅಂಶಗಳಿಗೂ ಸರಕಾರದ ಅಧಿಕೃತ ಬಾಕಿ ಲೆಕ್ಕಕ್ಕೂ ತಾಳೆಯಾಗುತ್ತಿಲ್ಲ ಎನ್ನಲಾಗಿದೆ. ಗುತ್ತಿಗೆದಾರರ ಸಂಘದ ಲೆಕ್ಕಾಚಾರದಲ್ಲಿ ಸದ್ಯ ಪ್ರಗತಿಯಲ್ಲಿರುವ ಕಾಮಗಾರಿಗಳ ಅಂದಾಜು ಮೊತ್ತವೂ ಸೇರಿಕೊಂಡಿರಬಹುದು ಎಂದು ಅಧಿಕಾರಿಗಳು ಹೇಳುತ್ತಿದ್ದಾರೆಂದು ವರದಿಗಳಿವೆ. ನಿಜವಾಗಿ ಪಾವತಿಸಬೇಕಿರುವ ಪೂರ್ಣಗೊಂಡ ಕಾಮಗಾರಿಗಳ ಬಾಕಿ ಮೊತ್ತವನ್ನು ಪ್ರತ್ಯೇಕವಾಗಿ ನಿರ್ಧರಿಸಬೇಕಾಗಿದೆ ಎಂಬ ಮಾತು ಕೇಳಿಬಂದಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಹಲವು ಬಾರಿ ಪತ್ರ ಬರೆದಿದ್ದಲ್ಲದೆ, ಭೇಟಿಯಾಗಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ ಎಂಬ ಬೇಸರವನ್ನೂ ಸಂಘ ವ್ಯಕ್ತಪಡಿಸಿದೆ.

ಇದೇ ವರ್ಷ ಫೆಬ್ರವರಿಯಲ್ಲೂ ಗುತ್ತಿಗೆದಾರರ ಸಂಘ ಬಾಕಿ ಪಾವತಿಗೆ ಒತ್ತಾಯಿಸಿ ಮುಷ್ಕರ ಹೂಡುವ ಎಚ್ಚರಿಕೆ ನೀಡಿತ್ತು. ಆದರೆ ಹಿಂದಿನ ಸರಕಾರ ಬಾಕಿ ಉಳಿಸಿದ್ದಕ್ಕೆ ನಾವು ಹೇಗೆ ಹೊಣೆ ಎಂದು ಆಗ ಡಿಸಿಎಂ ಹುದ್ದೆಯಲ್ಲಿದ್ದ ಡಿ.ಕೆ. ಶಿವಕುಮಾರ್ ತಿರುಗೇಟು ಕೊಟ್ಟಿದ್ದರು. ಮುಖ್ಯಮಂತ್ರಿಯಾದ ಬಳಿಕ ಜೂನ್‌ನಲ್ಲಿ ರಾಜ್ಯ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳ ಜೊತೆ ಚರ್ಚಿಸಿದ್ದ ಡಿ.ಕೆ. ಶಿವಕುಮಾರ್, ಗುತ್ತಿಗೆದಾರರಿಗೆ ಬಾಕಿ ಇರುವ ಹಣವನ್ನು ಎರಡು ತಿಂಗಳೊಳಗೆ ಬಿಡುಗಡೆ ಮಾಡುವುದಾಗಿ ಭರವಸೆ ನೀಡಿದ್ದರು ಎಂದು ಸಂಘ ಹೇಳಿದೆ. ಗುತ್ತಿಗೆದಾರರು ಸಾಲದ ಸುಳಿಯಲ್ಲಿ ಸಿಲುಕಿದ್ದು ಸಂಕಷ್ಟದಲ್ಲಿರುವುದಾಗಿ ಸಂಘ ಹೇಳುತ್ತಿದೆ. ಚುನಾವಣೆಗಳಲ್ಲಿ ಬಳಸಿಕೊಂಡು ನಂತರ ಕಾಂಗ್ರೆಸ್ ಸರಕಾರ ತಮ್ಮನ್ನು ಮರೆತಿದೆ ಎಂದು ದೂರಿದೆ. ಅಲ್ಲದೆ, ಟೆಂಡರ್ ನೀಡಲು ಮತ್ತು ಬಾಕಿ ಹಣ ಬಿಡುಗಡೆ ಮಾಡಲು ಕಮಿಷನ್‌ಗೆ ಬೇಡಿಕೆ ಇಡುವ ಮೂಲಕ ಹಲವು ಶಾಸಕರು ತಮ್ಮ ಕೆಲಸದಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದೂ ಅದು ಆರೋಪಿಸಿದೆ.

ಈ ನಡುವೆ, ಬಾಕಿ ಪಾವತಿಗೆಂದು 2,400 ಕೋಟಿ ರೂ. ಯನ್ನು ನೀರಾವರಿ ಇಲಾಖೆಗೆ ಸರಕಾರ ಬಿಡುಗಡೆ ಮಾಡಿದ್ದು, ಪ್ರತಿಭಟನೆ ಮತ್ತು ಲಂಚಕೋರ ಶಾಸಕರ ಹೆಸರು ಬಯಲು ಮಾಡುವ ಎಚ್ಚರಿಕೆ ಬಳಿಕ ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂಬ ಟೀಕೆಯೂ ಬಂದಿದೆ. ಅಲ್ಲದೆ, ಒಂದೇ ಕಂತಿನಲ್ಲಿ ಪಾವತಿಸದೆ ಆಗೀಗ ಇಷ್ಟು ಸಣ್ಣ ಮೊತ್ತ ನೀಡುತ್ತಿದ್ದರೆ ಏನು ಪ್ರಯೋಜನ ಎಂದು ಸಂಘದ ಅಧ್ಯಕ್ಷರು ಬೇಸರದ ಪ್ರಶ್ನೆಯೆತ್ತಿದ್ದಾರೆ. ಕೆಲವು ಇಲಾಖೆಗಳ ಟೆಂಡರ್ ಹಾಗೂ ಹಣ ಬಿಡುಗಡೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಇಲ್ಲ ಎಂಬ ಆರೋಪವನ್ನೂ ಮಾಡಲಾಗಿದೆ. ಕಮಿಷನ್ ಆರೋಪದ ಸುಳಿಯಲ್ಲಿ ಕಾಂಗ್ರೆಸ್ ಕೂಡ ಸಿಲುಕಿದೆ ಎಂಬುದೇ ಕಳವಳದ ವಿಷಯ. 40 ಪರ್ಸೆಂಟ್ ಕಮಿಷನ್ ಆರೋಪ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಸೋಲಿಗೆ ಪ್ರಮುಖ ಕಾರಣಗಳಲ್ಲಿ ಒಂದಾಗಿತ್ತು. ಆ ವಿಷಯ ಮುಂದಿಟ್ಟುಕೊಂಡು ಬಿಜೆಪಿ ಸರಕಾರದ ವಿರುದ್ಧ ಕಾಂಗ್ರೆಸ್ ಬೃಹತ್ ಹೋರಾಟ ಕೈಗೆತ್ತಿಕೊಂಡಿತ್ತು. ಜನರು ಬಿಜೆಪಿಯನ್ನು ತಿರಸ್ಕರಿಸುವಂತೆ ಮಾಡಲು ಕಾಂಗ್ರೆಸ್ ಅದನ್ನು ಅಸ್ತ್ರವಾಗಿ ಬಳಕೆ ಮಾಡಿಕೊಂಡಿತ್ತು. ಕಮಿಷನ್ ಆರೋಪದ ಕಾರಣಕ್ಕೆ ಆಗ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಈಶ್ವರಪ್ಪ, ಗುತ್ತಿಗೆದಾರರ ಸಂಘದ ಆಗಿನ ಅಧ್ಯಕ್ಷ ಕೆಂಪಣ್ಣ ಅವರನ್ನು ಕಾಂಗ್ರೆಸ್ ಏಜೆಂಟ್ ಎಂದು ಜರೆದಿದ್ದರು. ಆದರೆ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಅದೇ ಕೆಂಪಣ್ಣ ಬಿಜೆಪಿ ಸರಕಾರದ ವಿರುದ್ಧ ಮಾಡಿದ್ದ ಅದೇ ಆರೋಪವನ್ನು ಕಾಂಗ್ರೆಸ್ ವಿರುದ್ಧವೂ ಮಾಡಿದರು. ಇದೆಲ್ಲದರ ನಡುವೆ, ಬಿಜೆಪಿ ಸರಕಾರದ ಅವಧಿಯಲ್ಲಿನ 40 ಪರ್ಸೆಂಟ್ ಕಮಿಷನ್ ಆರೋಪಕ್ಕೆ ಸಂಬಂಧಿಸಿ ತನಿಖೆ ನಡೆಸಿದ್ದ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಸಮಿತಿ, ಆಡಳಿತದಲ್ಲಿ ಭ್ರಷ್ಟಾಚಾರ ಮತ್ತು ಕಾನೂನು ಉಲ್ಲಂಘನೆಗಳು ಇರುವುದು ನಿಜವಾದರೂ, ಬಿಜೆಪಿ ವಿರುದ್ಧದ ನಿರ್ದಿಷ್ಟ 40 ಪರ್ಸೆಂಟ್ ಕಮಿಷನ್ ಆರೋಪಕ್ಕೆ ಯಾವುದೇ ದೃಢ ಪುರಾವೆಗಳಿಲ್ಲ ಎಂದಿತ್ತು. ಕೊಟ್ಟವರು ಮತ್ತು ತೆಗೆದುಕೊಂಡವರ ನಡುವಿನ ಈ ವ್ಯವಹಾರದ ಆರೋಪಕ್ಕೆ ಆವತ್ತು ಉರಿದುಬೀಳುತ್ತಿದ್ದ ಬಿಜೆಪಿ ಪುರಾವೆ ಕೊಡಿ ಎನ್ನುತ್ತಿತ್ತು. ಈಗಿನವರು ದೂರು ಕೊಡಿ ಎನ್ನುತ್ತಿದ್ದಾರೆ. ಇದರ ನಡುವೆ, ಕಮಿಷನ್‌ಗಾಗಿಯೇ ನಿಜವಾಗಿಯೂ ಅಷ್ಟು ದೊಡ್ಡ ಭಾಗ ಹೋಗುತ್ತಿದ್ದರೆ ಕಾಮಗಾರಿಗಳ ಗುಣಮಟ್ಟದ ಕಥೆಯೇನು? ನಡೆಯುತ್ತಿರುವುದೇನೆಂದು ಎಲ್ಲರಿಗೂ ಗೊತ್ತಿದ್ದರೂ ಯಾರಿಗೂ ಗೊತ್ತಿಲ್ಲದಂತಿರುವ ದೇಶದಲ್ಲಿ ಅದು ಅಪ್ರಸ್ತುತ ಚಿಂತೆ.

ಈ ಇಡೀ ವಿಷಯ ರಾಜಕೀಯ ಸ್ವರೂಪ ಪಡೆಯುತ್ತಿರುವುದು ಸ್ಪಷ್ಟವಾಗಿದೆ. ಗುತ್ತಿಗೆದಾರರ ಪತ್ರದ ವಿಷಯವಾಗಿ ರಾಜ್ಯ ಸರಕಾರ ಸ್ಪಷ್ಟನೆ ನೀಡಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಒತ್ತಾಯಿಸಿದ್ದಾರೆ. ಒಂದು ಕಾಲದಲ್ಲಿ ತನ್ನ ವಿರುದ್ಧ ಹೂಡಲಾಗಿದ್ದ ಬಾಣವನ್ನು ಬಿಜೆಪಿ ಈಗ ಕಾಂಗ್ರೆಸ್‌ಗೆ ತಿರುಗುಬಾಣವಾಗಿಸಲು ನೋಡುತ್ತಿದೆ. ರಣರಂಗದಲ್ಲಿ ರಥ ಮುರಿದ ಸ್ಥಿತಿಯೊಳಗೆ ಕಾಂಗ್ರೆಸ್ ಸಿಕ್ಕಿಬಿದ್ದಿದೆಯೇ ಎಂಬುದು ಈಗ ಪ್ರಶ್ನೆ.

ಗ್ರೇಟ್ ನಿಕೋಬಾರ್ ಯೋಜನೆ: ಕಲ್ಕತ್ತಾ ಹೈಕೋರ್ಟ್ ವಿಚಾರಣೆಗೆ ತಡೆ ನೀಡಲು ಸುಪ್ರೀಂ ನಕಾರ

''ಸಂಸ್ಕೃತಿಯ ರಕ್ಷಣೆಯು ಸಂವಿಧಾನದಿಂದ ರಕ್ಷಿಸಲ್ಪಟ್ಟ ಮೂಲಭೂತ ಹಕ್ಕಾಗಿದೆ'' ಎಂದು ಸುಪ್ರೀಂ ಕೋರ್ಟ್ ಸೋಮವಾರ (ಅಕ್ಟೋಬರ್ 5) ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ. ಜೊತೆಗೆ, ಗ್ರೇಟ್ ನಿಕೋಬಾರ್ ದ್ವೀಪ ಯೋಜನೆಯಿಂದ ಅಲ್ಲಿನ ಸೂಕ್ಷ್ಮ ಪರಿಸರ ಹಾಗೂ 2006ರ ಅರಣ್ಯ ಹಕ್ಕುಗಳ ಕಾಯ್ದೆಗೆ ಧಕ್ಕೆಯಾಗಲಿದೆ ಎಂದು ಆಕ್ಷೇಪಿಸಿ ಕಲ್ಕತ್ತಾ ಹೈಕೋರ್ಟ್‌ನಲ್ಲಿ ಮಾಜಿ ಕೇಂದ್ರ ಪರಿಸರ ಕಾರ್ಯದರ್ಶಿ ಮೀನಾ ಗುಪ್ತಾ ದಾಖಲಿಸಿದ್ದ ಅರ್ಜಿಯ ವಿಚಾರಣೆಗೆ ತಡೆ ನೀಡಬೇಕೆಂಬ ಕೇಂದ್ರ ಸರ್ಕಾರದ ಮನವಿಯನ್ನು ನ್ಯಾಯಾಲಯ ತಿರಸ್ಕರಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ನೇತೃತ್ವದ ಮೂವರು ನ್ಯಾಯಮೂರ್ತಿಗಳ ಪೀಠವು ಈ ಕುರಿತು ವಿಚಾರಣೆ ನಡೆಸಿದ್ದು, ಪ್ರಕರಣದ ಕುರಿತಾದ ಎಲ್ಲಾ ಅರ್ಜಿಗಳನ್ನು ಯಾವುದೇ ವಿಳಂಬವಿಲ್ಲದೆ ಇತ್ಯರ್ಥಪಡಿಸುವಂತೆ ಕಲ್ಕತ್ತಾ ಹೈಕೋರ್ಟ್‌ಗೆ ಸೂಚನೆ ನೀಡಿದೆ.

ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಅಟಾರ್ನಿ ಜನರಲ್ ಆರ್. ವೆಂಕಟರಮಣಿ ಮತ್ತು ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯ ಭಾಟಿ ಅವರು ವಾದ ಮಂಡಿಸಿ, ''ಕಂಟೈನರ್ ಟರ್ಮಿನಲ್ ಒಳಗೊಂಡಿರುವ 72,000 ಕೋಟಿ ರೂ.ಗೂ ಅಧಿಕ ವೆಚ್ಚದ ಈ ಯೋಜನೆಯು ರಾಷ್ಟ್ರೀಯ ದೃಷ್ಟಿಯಿಂದ ಹಾಗೂ ಕಾರ್ಯತಂತ್ರದ ದೃಷ್ಟಿಯಿಂದ ಅತ್ಯಂತ ಪ್ರಾಮುಖ್ಯತೆಯನ್ನು ಹೊಂದಿದೆ'' ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಅಲ್ಲದೆ, ಇದರಿಂದ ಗ್ರೇಟ್ ನಿಕೋಬಾರ್ ದ್ವೀಪದಲ್ಲಿ ವಾಸಿಸುತ್ತಿರುವ, ಅಳಿವಿನಂಚಿನಲ್ಲಿರುವ ಶೋಂಪೆನ್ () ನಂತಹ ಸ್ಥಳೀಯ ಬುಡಕಟ್ಟು ಜನಾಂಗದವರ ಆವಾಸಸ್ಥಾನಕ್ಕೆ ಯಾವುದೇ ಹಾನಿಯಾಗುವುದಿಲ್ಲ ಎಂದು ವೆಂಕಟರಮಣಿ ಪ್ರತಿಪಾದಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪೀಠದಲ್ಲಿದ್ದ ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ. ಮೋಹನಾ ಅವರು, ರಾಷ್ಟ್ರದ ಭದ್ರತೆ ಮತ್ತು ವಾಣಿಜ್ಯ ಹಿತಾಸಕ್ತಿಗಳ ನಡುವೆ ಸ್ಪಷ್ಟವಾದ ವ್ಯತ್ಯಾಸವಿರಬೇಕು ಎಂದು ಅಭಿಪ್ರಾಯಪಟ್ಟರು.

ಪದವೀಧರ ಕ್ಷೇತ್ರ: ಕಾಂಗ್ರೆಸ್-ಬಿಜೆಪಿ ನಡುವೆ ಬಿರುಸಿನ ಸ್ಪರ್ಧೆ!

ವಿಧಾನ ಪರಿಷತ್ತಿನ ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆ ಕಾವು ಪಡೆದುಕೊಂಡಿದ್ದು, ಬಿಜೆಪಿಜೆಡಿಎಸ್ ಮೈತ್ರಿ ಮತ್ತು ಕಾಂಗ್ರೆಸ್ ನಡುವೆ ನೇರ ಹಣಾಹಣಿಯ ವಾತಾವರಣ ನಿರ್ಮಾಣವಾಗಿದೆ. ಕಾಂಗ್ರೆಸ್‌ನಿಂದ ಶಶಿ ಹುಲಿಕುಂಟೆಮಠ ಹಾಗೂ ಬಿಜೆಪಿ ಅಭ್ಯರ್ಥಿಯಾಗಿ ಕೆ.ಎಂ. ಸುರೇಶ್ ಕಣದಲ್ಲಿದ್ದು, ಎರಡೂ ಪಕ್ಷಗಳು ಪದವೀಧರರು, ಶಿಕ್ಷಕರು ಹಾಗೂ ಉಪನ್ಯಾಸಕರನ್ನು ತಲುಪಲು ಸಂಘಟನಾತ್ಮಕವಾಗಿ ಮುಂದಾಗಿವೆ.

ಕ್ಷೇತ್ರದ ರಾಜಕೀಯ ಇತಿಹಾಸದಲ್ಲಿ ಬಿಜೆಪಿ ಹಲವು ಬಾರಿ ಗೆಲುವು ಸಾಧಿಸಿರುವುದು ಕಾಂಗ್ರೆಸ್‌ಗೆ ಪ್ರಮುಖ ಸವಾಲಾಗಿ ಪರಿಣಮಿಸಿದೆ. ಮತ್ತೊಂದೆಡೆ, ಬಿಜೆಪಿ ಜೆಡಿಎಸ್ ಒಟ್ಟಾಗಿ ಚುನಾವಣೆ ಎದುರಿಸುತ್ತಿರುವುದು ತನ್ನ ಸಂಘಟನಾ ಬಲವನ್ನು ವಿಸ್ತರಿಸಿಕೊಳ್ಳುವ ಅವಕಾಶವೆಂದು ಬಿಜೆಪಿ ನೋಡುತ್ತಿದೆ. ಎರಡೂ ಪಕ್ಷಗಳ ಸ್ಥಳೀಯವಾಗಿ ಮತದಾರರನ್ನು ನೇರವಾಗಿ ಸಂಪರ್ಕಿಸುವ ಕಾರ್ಯಕ್ಕೆ ಒತ್ತು ನೀಡಿವೆ.

ಕಾಂಗ್ರೆಸ್ ಪಾಲಿಗೆ ಈ ಚುನಾವಣೆ ಮತ್ತೊಂದು ಕಾರಣಕ್ಕೂ ಮಹತ್ವದ್ದಾಗಿದೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಈವರೆಗೆ ಗೆಲುವು ಸಾಧಿಸಲು ಸಾಧ್ಯವಾಗದಿರುವ ಹಿನ್ನೆಲೆಯಲ್ಲಿ, ಈ ಬಾರಿ ಮುಂಚಿತವಾಗಿಯೇ ಅಭ್ಯರ್ಥಿಯನ್ನು ಘೋಷಿಸಿ ಕ್ಷೇತ್ರದಲ್ಲಿ ಸಂಘಟನಾ ಚಟುವಟಿಕೆ ಆರಂಭಿಸಿತ್ತು. ಯುವ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಕ್ಷೇತ್ರದಾದ್ಯಂತ ವ್ಯಾಪಕವಾಗಿ ಸಂಚರಿಸಿ ಮತದಾರರನ್ನು ಸಂಪರ್ಕಿಸಿ ಪ್ರಚಾರ ನಡೆಸುತ್ತಿದ್ದಾರೆ. ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ. ಶ್ರೀನಿವಾಸ್ ಅವರ ಗೆಲುವಿನ ತಂತ್ರವನ್ನು, ಇಲ್ಲಿಯೂ ಬಳಸುವ ಪ್ರಯತ್ನ ನಡೆಯುತ್ತಿದೆ ಎಂಬ ಚರ್ಚೆಗಳು ನಡೆಯುತ್ತಿವೆ.

ಇತ್ತ ಬಿಜೆಪಿ ಅಭ್ಯರ್ಥಿ ಕೆ.ಎಂ. ಸುರೇಶ್ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ತಮಗೆ ಅವಕಾಶ ದೊರೆತಿದೆ ಎಂಬ ವಿಚಾರವನ್ನು ಮುಂದಿಟ್ಟುಕೊಂಡು ಮತಯಾಚಿಸುತ್ತಿದ್ದಾರೆ. ಬಿಜೆಪಿಜೆಡಿಎಸ್ ಸಂಘಟನೆಗಳ ಸಮನ್ವಯ, ಮತದಾರರನ್ನು ನಿರಂತರವಾಗಿ ಸಂಪರ್ಕಿಸುವ ಕಾರ್ಯ ಹಾಗೂ ಪ್ರತಿ ಮತದಾರರ ಗುಂಪಿಗೂ ಕಾರ್ಯಕರ್ತರನ್ನು ನಿಯೋಜಿಸುವ ಕ್ರಮವನ್ನು ಪಕ್ಷದ ನಾಯಕರು ತಮ್ಮ ಪ್ರಮುಖ ತಂತ್ರವಾಗಿಸಿಕೊಂಡಿದ್ದಾರೆ.



ಬಿಜೆಪಿಜೆಡಿಎಸ್ ನಾಯಕತ್ವವೂ ಈ ಚುನಾವಣೆಯನ್ನು ಜಂಟಿ ಮೈತ್ರಿಯಾಗಿ ಕೆಲಸ ಮಾಡುವ ಸವಾಲು ಎನ್‌ಡಿಎ ಅಭ್ಯರ್ಥಿ ಮುಂದೆ ಇದೆ.

ಈ ಕ್ಷೇತ್ರದ ಚುನಾವಣೆಯಲ್ಲಿ ಸಾಮಾನ್ಯ ವಿಧಾನಸಭಾ ಚುನಾವಣೆಯ ಮತದಾರರ ಸಮೀಕರಣಕ್ಕಿಂತ ಪದವೀಧರ ಮತದಾರರ ನಿರ್ದಿಷ್ಟ ಸ್ವರೂಪ ಮಹತ್ವ ಪಡೆಯುತ್ತದೆ. ಶಿಕ್ಷಕರು, ಉಪನ್ಯಾಸಕರು ಸೇರಿದಂತೆ ವಿದ್ಯಾವಂತ ಮತದಾರರ ಸಂಖ್ಯೆ ಗಮನಾರ್ಹವಾಗಿರುವುದರಿಂದ ಅಭ್ಯರ್ಥಿಗಳ ವೈಯಕ್ತಿಕ ಸಂಪರ್ಕ, ಸಂಘಟನಾ ಜಾಲ ಮತ್ತು ಮತದಾರರ ಸಮಸ್ಯೆಗಳ ಕುರಿತ ನಿಲುವುಗಳು ಚುನಾವಣಾ ಪ್ರಚಾರದ ಪ್ರಮುಖ ಅಂಶಗಳಾಗಿವೆ.

ಕ್ಷೇತ್ರದ ವ್ಯಾಪ್ತಿ ತುಮಕೂರು, ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ದಾವಣಗೆರೆ ಜಿಲ್ಲೆಯ ಕೆಲವು ತಾಲ್ಲೂಕುಗಳನ್ನು ಒಳಗೊಂಡಿದೆ. ಹೀಗಾಗಿ ಐದು ಜಿಲ್ಲೆಗಳ ವಿವಿಧ ಭಾಗಗಳಲ್ಲಿ ಮತದಾರರನ್ನು ತಲುಪುವುದು ಎರಡೂ ಪಕ್ಷಗಳಿಗೆ ಸಂಘಟನಾ ಸವಾಲಾಗಿದೆ.

ಎರಡೂ ಪ್ರಮುಖ ಅಭ್ಯರ್ಥಿಗಳು ಲಿಂಗಾಯತ ಸಮುದಾಯಕ್ಕೆ ಸೇರಿದವರಾಗಿರುವುದು ಕ್ಷೇತ್ರದ ಸಾಮಾಜಿಕ ಸಮೀಕರಣದ ಚರ್ಚೆಗೆ ಕಾರಣವಾಗಿದೆ. ಆದರೆ ಇದು ಕೇವಲ ಜಾತಿ ಸಮೀಕರಣದ ಚುನಾವಣೆ ಆಗದೆ, ಪದವೀಧರ ಮತದಾರರ ನಿರ್ದಿಷ್ಟ ಸಮಸ್ಯೆಗಳು, ಅಭ್ಯರ್ಥಿಗಳ ಸಂಪರ್ಕ ಹಾಗೂ ಪಕ್ಷಗಳ ಸಂಘಟನಾ ಸಾಮರ್ಥ್ಯವೂ ನಿರ್ಣಾಯಕ ಅಂಶಗಳಾಗುವ ಸಾಧ್ಯತೆ ಇದೆ ಎಂಬುದು ಎರಡೂ ಬಣಗಳ ಪ್ರಚಾರದ ಕೇಂದ್ರಬಿಂದುವಾಗಿದೆ.

ಕಾಂಗ್ರೆಸ್ ತನ್ನ ಶಾಸಕರ ಸಂಖ್ಯೆಯನ್ನು ಸಂಘಟನಾ ಬಲವಾಗಿ ಪರಿಗಣಿಸುತ್ತಿದ್ದರೆ, ಬಿಜೆಪಿಜೆಡಿಎಸ್ ಮೈತ್ರಿ ಮತಗಳ ಸಮನ್ವಯವನ್ನು ಪ್ರಮುಖ ಆಧಾರವಾಗಿ ನೋಡುತ್ತಿದೆ. ಹೀಗಾಗಿ ವಿಧಾನಸಭಾ ಚುನಾವಣೆಯ ರಾಜಕೀಯ ಲೆಕ್ಕಾಚಾರವನ್ನು ನೇರವಾಗಿ ವಿಧಾನ ಪರಿಷತ್ ಚುನಾವಣೆಗೆ ಅನ್ವಯಿಸಲು ಸಾಧ್ಯವಿಲ್ಲ ಎಂಬ ಅಭಿಪ್ರಾಯವೂ ಎರಡೂ ಬಣಗಳಿಂದ ವ್ಯಕ್ತವಾಗುತ್ತಿದೆ.

ಚುನಾವಣಾ ವೇಳಾಪಟ್ಟಿಯಂತೆ ಅಕ್ಟೋಬರ್ 6 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ, ಅಕ್ಟೋಬರ್ 9ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದ್ದು, ಅಕ್ಟೋಬರ್ 23ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದೆ. ಅಕ್ಟೋಬರ್ 27ರಂದು ಮತ ಎಣಿಕೆ ನಡೆಯಲಿದೆ.

ಒಟ್ಟಿನಲ್ಲಿ, ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆ ಎರಡು ಪ್ರಮುಖ ರಾಜಕೀಯ ಬಣಗಳ ಸಂಘಟನಾ ಸಾಮರ್ಥ್ಯ, ಅಭ್ಯರ್ಥಿಗಳ ವೈಯಕ್ತಿಕ ಸಂಪರ್ಕ ಹಾಗೂ ಪದವೀಧರ ಮತದಾರರನ್ನು ತಲುಪುವ ತಂತ್ರಗಳ ನಡುವಿನ ಸ್ಪರ್ಧೆಯಾಗಿ ರೂಪುಗೊಂಡಿದೆ. ಹಳೆಯ ಚುನಾವಣಾ ಫಲಿತಾಂಶಗಳ ಹಿನ್ನೆಲೆ ಒಂದೆಡೆಯಾದರೆ, ಹೊಸ ರಾಜಕೀಯ ಮೈತ್ರಿ ಮತ್ತು ಯುವ ಅಭ್ಯರ್ಥಿಯ ಪ್ರವೇಶ ಮತ್ತೊಂದೆಡೆ ಇದೆ. ಅಂತಿಮವಾಗಿ ಮತದಾರರ ಆಯ್ಕೆ ಯಾವ ಅಂಶಗಳ ಮೇಲೆ ನೆಲೆಯಾಗುತ್ತದೆ ಎಂಬುದು ಅಕ್ಟೋಬರ್ 23ರ ಮತದಾನದ ಬಳಿಕವೇ ಸ್ಪಷ್ಟವಾಗಲಿದೆ.

ಸಂಪತ್ತು ಮತ್ತು ಮನುಷ್ಯನ ನೈತಿಕತೆ: ಅರ್ಥಶಾಸ್ತ್ರದ ಇಗ್ನೊಬೆಲ್ ಪ್ರಶಸ್ತಿ ವಿಜೇತ ಸಂಶೋಧನೆ

ಪ್ರತಿವರ್ಷ ನೊಬೆಲ್ ಪ್ರಶಸ್ತಿ ಘೋಷಣೆಯಾಗುವ ಕೆಲವೇ ದಿನಗಳ ಮೊದಲು ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ನೊಬೆಲ್ ಪುರಸ್ಕೃತರ ಸಮ್ಮುಖದಲ್ಲೇ ಇಗ್ ನೊಬೆಲ್ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತದೆ. ಮೊದಲು ಜನರನ್ನು ನಗಿಸಬೇಕು, ನಂತರ ಅವರನ್ನು ಆಳವಾಗಿ ಯೋಚಿಸುವಂತೆ ಮಾಡಬೇಕು ಎಂಬುದು ಈ ಪ್ರಶಸ್ತಿಯ ಧ್ಯೇಯವಾಕ್ಯ.

ಸದ್ಯದಲ್ಲೇ ನೊಬೆಲ್ ಪ್ರಶಸ್ತಿಗಳು ಘೋಷಣೆಗೊಳ್ಳಲಿದೆ. ಹಾಗೆಯೇ ಇಗ್ ನೊಬೆಲ್ ಎಂಬ ಪ್ರಶಸ್ತಿಯು ಇದೆ ಅನ್ನುವುದು ಹಲವರಿಗೆ ಗೊತ್ತಿಲ್ಲದೇ ಇರಬಹುದು. ಈ ವಿಶಿಷ್ಟವಾದ ಪ್ರಶಸ್ತಿ ನೊಬೆಲ್ ಪ್ರಶಸ್ತಿಯ ಲೇವಡಿಯಾಗಿ ಕಾಣುವ ಒಂದು ರೂಪಾಂತರ. ಇದನ್ನು 1991ರಲ್ಲಿ ಮಾರ್ಕ್ ಅಬ್ರಹಾಮ್ಸ್ ಆರಂಭಿಸಿದರು. ಪ್ರತಿವರ್ಷ ನೊಬೆಲ್ ಪ್ರಶಸ್ತಿ ಘೋಷಣೆಯಾಗುವ ಕೆಲವೇ ದಿನಗಳ ಮೊದಲು ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ನೊಬೆಲ್ ಪುರಸ್ಕೃತರ ಸಮ್ಮುಖದಲ್ಲೇ ಈ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತದೆ. ''ಮೊದಲು ಜನರನ್ನು ನಗಿಸಬೇಕು, ನಂತರ ಅವರನ್ನು ಆಳವಾಗಿ ಯೋಚಿಸುವಂತೆ ಮಾಡಬೇಕು'' (,) ಎಂಬುದು ಈ ಪ್ರಶಸ್ತಿಯ ಧ್ಯೇಯವಾಕ್ಯ. ಇಲ್ಲಿ ನೀಡಲಾಗುವ ಪ್ರಶಸ್ತಿಗಳ ಉದ್ದೇಶ ಕೇವಲ ಗೇಲಿ ಮಾಡುವುದಲ್ಲ; ವಿಜ್ಞಾನಿಗಳು ಕೈಗೊಂಡ ನಿಜವಾದ, ಆದರೆ ಮೇಲುನೋಟಕ್ಕೆ ತೀರಾ ವಿಚಿತ್ರವೆನಿಸುವ ಸಂಶೋಧನೆಗಳನ್ನು ಇದು ಗೌರವಿಸುತ್ತದೆ. ಇಂಗ್ಲಿಷಿನ ಇಗ್ ನೊಬೆಲ್ (- ಅಪ್ರತಿಷ್ಠಿತ ಅಥವಾ ಸಾಮಾನ್ಯ) ಎಂಬ ಪದದ ಧ್ವನಿಯನ್ನಿಟ್ಟುಕೊಂಡು, ಆಲ್ಫ್ರೆಡ್ ನೊಬೆಲ್ ಅವರ ಹೆಸರಿಗೆ ಪ್ರಾಸಬದ್ಧವಾಗಿ ಈ ಪ್ರಶಸ್ತಿಯನ್ನು ಇಗ್ನೊಬೆಲ್ ಎಂದು ಕರೆಯಲಾಗಿದೆ.

ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದ (ಅರ್ವಿನ್) ಮನಶ್ಶಾಸ್ತ್ರಜ್ಞ ಪಾಲ್ ಕೆ. ಪಿಫ್ ಮತ್ತು ಅವರ ತಂಡ ಕೈಗೊಂಡ ಸಂಶೋಧನೆಗಳಿಗೆ ಅರ್ಥಶಾಸ್ತ್ರ ವಿಭಾಗದ ಇಗ್ ನೊಬೆಲ್ ಪ್ರಶಸ್ತಿ ಲಭಿಸಿದೆ. ಸಂಪತ್ತು ಮತ್ತು ಉನ್ನತ ಸಾಮಾಜಿಕ ಅಂತಸ್ತುಗಳು ಮನುಷ್ಯನ ನೈತಿಕತೆ, ಸಹಾನುಭೂತಿ ಹಾಗೂ ಸಾಮಾಜಿಕ ನಡವಳಿಕೆಯ ಮೇಲೆ ಹೇಗೆ ಪ್ರಭಾವ ಬೀರುತ್ತವೆ ಎಂಬುದನ್ನು ಇವರ ಅಧ್ಯಯನ ಪರಿಶೀಲಿಸುತ್ತದೆ. ಈ ಬಗ್ಗೆ ಅವರು 2012ರಲ್ಲಿ ಎಂಬ ಹೆಸರಿನಲ್ಲಿ ಪ್ರಕಟಿಸಿದ ಸಂಶೋದನಾ ಲೇಖನ ವಿಶ್ವಾದ್ಯಂತ ಗಮನ ಸೆಳೆದಿತ್ತು.

ಕೆಳ ಮತ್ತು ಮಧ್ಯಮ ವರ್ಗದ ಜನರಿಗೆ ಹೋಲಿಸಿದರೆ, ಸಮಾಜದ ಉನ್ನತ ವರ್ಗದ ಹಿನ್ನೆಲೆಯಿಂದ ಬಂದವರು ಸ್ವಾರ್ಥ ಮತ್ತು ಅನೈತಿಕತೆಯಿಂದ ವರ್ತಿಸುವ ಸಾಧ್ಯತೆ ಹೆಚ್ಚು ಎಂಬುದನ್ನು ಪಿಫ್ ಅವರ ಸಂಶೋಧನೆ ಪ್ರಾಯೋಗಿಕವಾಗಿ ದಾಖಲಿಸಿದೆ. ಅದಕ್ಕಾಗಿ ಅವರು ರಸ್ತೆಸಂಚಾರಕ್ಕೆ ಸಂಬಂಧಿಸಿದಂತೆ ಸಮಾಜದ ವಿವಿಧ ಸ್ತರದವರು ಹೇಗೆ ವರ್ತಿಸುತ್ತಾರೆ ಎಂಬುದನ್ನು ಗಮನಿಸಿದ್ದಾರೆ.

ಜನನಿಬಿಡವಾದ ನಾಲ್ಕು ರಸ್ತೆಗಳ ವೃತ್ತಗಳಲ್ಲಿ ಸಂಶೋಧಕರು ಪೊದೆಗಳ ಹಿಂದೆ ನಿಂತು ವಿವಿಧ ವಾಹನಗಳ ಚಾಲಕರ ವರ್ತನೆಗಳನ್ನು ಗಮನಿಸಿದರು. ಅದಕ್ಕಾಗಿ ವಾಹನದ ಬೆಲೆ ಮತ್ತು ಮಾದರಿಯನ್ನು ಆಧಾರವಾಗಿಟ್ಟುಕೊಂಡರು. ಬಿಎಂಡಬ್ಲ್ಯು, ಮರ್ಸಿಡಿಸ್-ಬೆಂರ್ಝ್‌ನಂತಹ ದುಬಾರಿ ಐಷಾರಾಮಿ ಕಾರುಗಳ ಚಾಲಕರು ಇತರ ವಾಹನಗಳ ಹಕ್ಕನ್ನು ಕಸಿದುಕೊಂಡು, ತಮ್ಮ ಸರದಿಯನ್ನು ಮುರಿದು ನುಗ್ಗುವ ಸಾಧ್ಯತೆ ಸಾಮಾನ್ಯ ಕಾರುಗಳ ಚಾಲಕರಿಗಿಂತ ನಾಲ್ಕು ಪಟ್ಟು ಹೆಚ್ಚಾಗಿತ್ತು.

ಪಾದಚಾರಿಗಳನ್ನು ಕುರಿತಂತೆ ಇವರ ವರ್ತನೆಗಳನ್ನು ಗಮನಿಸಲು ಪಾದಚಾರಿಗಳು ರಸ್ತೆ ದಾಟುವ ಜೀಬ್ರಾ ಕ್ರಾಸಿಂಗ್‌ಗಳಲ್ಲಿ ಸ್ವತಃ ಸಂಶೋಧಕರೇ ಪಾದಚಾರಿಗಳಾಗಿ ರಸ್ತೆಗಿಳಿದು ಇವರ ನಡವಳಿಕೆಗಳನ್ನು ಗಮನಿಸಿದರು. ದುಬಾರಿ ಕಾರುಗಳ ಚಾಲಕರಲ್ಲಿ ಶೇ. 46ರಷ್ಟು ಮಂದಿ ನಿಯಮ ಪಾಲಿಸದೆ ಪಾದಚಾರಿಗಳನ್ನು ಲೆಕ್ಕಿಸದೆ ಮುಂದೆ ಸಾಗಿದರು. ಆದರೆ ಅಗ್ಗದ ಮತ್ತು ಹಳೆಯ ಕಾರುಗಳ ಚಾಲಕರೆಲ್ಲರೂ ನಿಯಮಬದ್ಧವಾಗಿ ವಾಹನ ನಿಲ್ಲಿಸಿ, ಪಾದಚಾರಿಗಳಿಗೆ ದಾರಿ ಮಾಡಿಕೊಟ್ಟರು.



ಅವರು ಮಾಡಿದ ಇನ್ನೊಂದು ಪ್ರಯೋಗ ಪ್ರಖ್ಯಾತವಾದ ಮಕ್ಕಳ ಕ್ಯಾಂಡಿ ಪರೀಕ್ಷೆ. ಈ ಪ್ರಯೋಗದಲ್ಲಿ ಭಾಗವಹಿಸುವುದಕ್ಕೆ ಪರೀಕ್ಷೆಗೆ ವಿವಿಧ ಸಾಮಾಜಿಕ ಮತ್ತು ಆರ್ಥಿಕ ವರ್ಗಗಳ ಜನರನ್ನು ಆಹ್ವಾನಿಸಲಾಗಿತ್ತು. ಪ್ರಯೋಗಾಲಯದಲ್ಲಿ ಒಂದು ಮೇಜಿನ ಮೇಲೆ ಒಂದು ಡಬ್ಬದಲ್ಲಿ ಕ್ಯಾಂಡಿಗಳನ್ನು ಇಡಲಾಗಿತ್ತು. ಅಧ್ಯಯನ ಮುಗಿಸಿದ ಮೇಲೆ ಮರಳಿಹೋಗುವಾಗ, ''ಬೇಕಿದ್ದರೆ ಆ ಜಾಡಿಯಿಂದ ಒಂದೆರಡು ಕ್ಯಾಂಡಿ ತೆಗೆದುಕೊಳ್ಳಬಹುದು'' ಎಂದು ಬಂದವರಿಗೆ ತಿಳಿಸಲಾಯಿತು.

ಜೊತೆಗೆ ಸಂಶೋಧಕರು ಇನ್ನೂ ಒಂದು ಮಾತನ್ನು ಬಂದವರಿಗೆ ಸ್ಪಷ್ಟವಾಗಿ ಹೇಳಿದ್ದರು: ''ಈ ಡಬ್ಬದಲ್ಲಿರುವ ಕ್ಯಾಂಡಿಗಳು ಪಕ್ಕದ ಕೋಣೆಯಲ್ಲಿ ಮತ್ತೊಂದು ಸಂಶೋಧನೆಗಾಗಿ ಬರುವ ಪುಟ್ಟ ಮಕ್ಕಳಿಗಾಗಿ ಇಡಲಾಗಿದೆ.''

ಇಲ್ಲಿ ಸಂಶೋಧಕರ ಉದ್ದೇಶ ವ್ಯಕ್ತಿಗಳು ಎಷ್ಟು ಸಿಹಿ ತಿನ್ನುತ್ತಾರೆ ಎಂದು ನೋಡುವುದಾಗಿರಲಿಲ್ಲ; ಮಕ್ಕಳಿಗಾಗಿ ಮೀಸಲಿಟ್ಟ ತಿಂಡಿಯನ್ನು ಯಾರು ಎಷ್ಟು ತೆಗೆದುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ಅವರಲ್ಲಿರುವ ಸಾಮಾಜಿಕ ಸಂಕೋಚ ಮತ್ತು ಕಾಳಜಿಯನ್ನು ಅಳೆಯುವುದಾಗಿತ್ತು.

ಅಂತಿಮವಾಗಿ ಗಮನಿಸಿದಾಗ ತಾವು ಶ್ರೀಮಂತರೆಂದು ಗುರುತಿಸಿಕೊಂಡಿದ್ದ ವ್ಯಕ್ತಿಗಳು, ಸಾಮಾನ್ಯ ಮತ್ತು ಮಧ್ಯಮ ವರ್ಗದವರಿಗಿಂತ ಎರಡು ಪಟ್ಟು ಹೆಚ್ಚು ಕ್ಯಾಂಡಿಗಳನ್ನು ಎತ್ತಿಕೊಂಡರು. ಮಕ್ಕಳ ಪಾಲಿಗಿಟ್ಟ ತಿಂಡಿಯನ್ನು ಹೆಚ್ಚು ತೆಗೆದುಕೊಳ್ಳುವುದು ತಪ್ಪು ಎಂಬ ಹಿಂಜರಿಕೆಯಾಗಲಿ, ಸಂಕೋಚವಾಗಲಿ ಅವರಲ್ಲಿ ಕಂಡುಬರಲಿಲ್ಲ. ಸಾರ್ವಜನಿಕ ಸಂಪನ್ಮೂಲಗಳನ್ನು ಬಳಸಿಕೊಳ್ಳುವಾಗ, ಹೆಚ್ಚು ಸಂಪತ್ತಿರುವವರಲ್ಲಿ ''ಇದು ನನಗೂ ಸಿಗಬೇಕು, ತೆಗೆದುಕೊಳ್ಳುವ ಹಕ್ಕು ನನಗಿದೆ'' ಎಂಬ ಭಾವನೆ ಬೇಗನೆ ಮೂಡುತ್ತದೆ. ಪರಿಣಾಮವಾಗಿ, ಮಕ್ಕಳ ಹಿತಾಸಕ್ತಿಯನ್ನು ಕಡೆಗಣಿಸಿಯಾದರೂ ತಮ್ಮ ಸ್ವಾರ್ಥವನ್ನು ತೃಪ್ತಿಪಡಿಸಿಕೊಳ್ಳಲು ಅವರು ಹಿಂಜರಿಯುವುದಿಲ್ಲ ಎಂಬುದನ್ನು ಈ ಪರೀಕ್ಷೆ ತೋರಿಸಿತು.

ಸಂಪತ್ತು ನಡವಳಿಕೆಯನ್ನು ಏಕೆ ಬದಲಾಯಿಸುತ್ತದೆ?

ಇಂತಹ ನಡವಳಿಕೆಗಳು ಹುಟ್ಟು ದುಷ್ಟತನದಿಂದ ಬಂದಿದ್ದಲ್ಲ; ಬದಲಿಗೆ ಹಣ ಮತ್ತು ಸಹಾನುಭೂತಿಯ ನಡುವೆ ಬೆಳೆಯುವ ಕಂದಕದಿಂದ ಉಂಟಾಗುತ್ತವೆ ಎಂದು ಪಿಫ್ ವಿವರಿಸುತ್ತಾರೆ. ಶ್ರೀಮಂತ ವ್ಯಕ್ತಿಗಳು ''ದುರಾಶೆ ಕೆಟ್ಟದ್ದಲ್ಲ, ಅದು ಪ್ರಗತಿಗೆ ಪೂರಕ'' ಹಾಗೂ ''ಸ್ವಾರ್ಥ ಸಾಧನೆಯೇ ಜೀವನದ ಪ್ರಮುಖ ಪ್ರೇರಕ ಶಕ್ತಿ'' ಎಂಬ ಮನಸ್ಥಿತಿಯನ್ನು ಸುಲಭವಾಗಿ ಒಪ್ಪಿಕೊಳ್ಳುತ್ತಾರೆ. ಹಣವಿದ್ದಾಗ ದಿನನಿತ್ಯದ ಸಮಸ್ಯೆಗಳನ್ನು ಹಣದ ಬಲದಿಂದಲೇ ಬಗೆಹರಿಸಿಕೊಳ್ಳಬಹುದು. ಹಾಗಾಗಿ ಶ್ರೀಮಂತರಿಗೆ ಬದುಕಿನ ಉಳಿವಿಗೆ ಸಮಾಜದ ಇತರರ ನೆರವಾಗಲಿ, ಪರಸ್ಪರ ಸಹಕಾರದ ಸಾಮಾಜಿಕ ವ್ಯವಸ್ಥೆಯಾಗಲಿ ಅಷ್ಟಾಗಿ ಬೇಕಾಗುವುದಿಲ್ಲ ಎನ್ನುವ ಮನಸ್ಥಿತಿಯಲ್ಲಿರುತ್ತಾರೆ. ಸಮಾಜದಿಂದ ಹೀಗೆ ಪ್ರತ್ಯೇಕವಾಗಿ ಬದುಕುವುದರಿಂದ, ಇತರರ ಕಷ್ಟ-ಸಂಕಷ್ಟಗಳಿಗೆ ಸ್ಪಂದಿಸುವ ಮಿಡಿತ ತಾನಾಗಿಯೇ ಕುಂಠಿತಗೊಳ್ಳುತ್ತದೆ.

ಸವಲತ್ತುಗಳು ಹೇಗೆ ವ್ಯಕ್ತಿಯಲ್ಲಿ ಅಹಂಕಾರ ಬೆಳೆಸುತ್ತವೆ ಎಂಬುದನ್ನು ಪಿಫ್ ತಮ್ಮ ಪ್ರಸಿದ್ಧ ಮೊನೊಪಲಿ ಬೋರ್ಡ್ ಆಟದ ಪ್ರಯೋಗದ ಮೂಲಕ ತೋರಿಸಿಕೊಟ್ಟರು. ಪಿಫ್ ಅವರು ಮೊನೊಪಲಿ ಎಂಬ ಜನಪ್ರಿಯ ಆಸ್ತಿ-ವ್ಯವಹಾರದ ಬೋರ್ಡ್ ಆಟವನ್ನು ಬಳಸಿಕೊಂಡು ಒಂದು ಕುತೂಹಲಕಾರಿ ಪ್ರಯೋಗ ಮಾಡಿದರು. ಇದರಲ್ಲಿ ಇಬ್ಬರು ಆಟಗಾರರ ನಡುವೆ ನಾಣ್ಯ ಚಿಮ್ಮಲಾಗುತ್ತದೆ. ಆದರೆ ಉದ್ದೇಶಪೂರ್ವಕವಾಗಿ ಒಬ್ಬ ಆಟಗಾರನಿಗೆ ಎಲ್ಲಾ ಆಟಗಾರರಿಗೆ ಮೊದಲೇ ಎಲ್ಲ ಸವಲತ್ತುಗಳು ಸಿಗುವಂತೆ ಆಟದ ನಿಯಮವನ್ನು ರೂಪಿಸಲಾಗಿರುತ್ತದೆ. ಇದು ಆ ಆಟಗಾರನಿಗೂ ತಿಳಿದಿರುತ್ತದೆ.

ಆ ಶ್ರೀಮಂತ ಆಟಗಾರನಿಗೆ ದುಪ್ಪಟ್ಟು ಆರಂಭಿಕ ಹಣ, ಎರಡು ದಾಳಗಳನ್ನು ಉರುಳಿಸುವ ಅವಕಾಶ ಮತ್ತು ಪ್ರತಿ ಸುತ್ತಿಗೂ ಸಾಮಾನ್ಯ ಆಟಗಾರನಿಗಿಂತ ದುಪ್ಪಟ್ಟು ಸಂಭಾವನೆ ಸಿಗುತ್ತಿತ್ತು. ಅಂದರೆ, ಆಟದ ವಿನ್ಯಾಸವೇ ಆ ಒಬ್ಬ ವ್ಯಕ್ತಿ ಗೆಲ್ಲುವಂತೆ ಪೂರ್ವಗ್ರಹಪೀಡಿತವಾಗಿತ್ತು. ಆಟ ಮುಂದುವರಿದಂತೆ ಆ ಶ್ರೀಮಂತ ಆಟಗಾರನ ವರ್ತನೆಯಲ್ಲಿ ಗಮನಾರ್ಹ ಬದಲಾವಣೆಗಳು ಕಂಡವು:

★ ಆತ ಮೇಜಿನ ಮೇಲೆ ತನ್ನ ದಾಳ ಮತ್ತು ಕಾಯಿಗಳನ್ನು ಜೋರಾಗಿ ಶಬ್ದ ಮಾಡುತ್ತಾ ದರ್ಪದಿಂದ ಅಪ್ಪಳಿಸತೊಡಗಿದ.

★ ಪಕ್ಕದಲ್ಲಿದ್ದ ಕುರುಕಲು ತಿಂಡಿಗಳನ್ನು ತನಗೆ ಮಾತ್ರ ಮೀಸಲೆಂಬಂತೆ ಹೆಚ್ಚು ಹೆಚ್ಚಾಗಿ ತಿನ್ನಲಾರಂಭಿಸಿದ.

★ ಎದುರಾಳಿಯ ಆಟವನ್ನು ಹೀಯಾಳಿಸುತ್ತಾ, ಎಲ್ಲವೂ ತನ್ನ ನಿಯಂತ್ರಣದಲ್ಲಿದೆ ಎಂಬ ಎಂಬ ಉದ್ದಟತನವನ್ನು ತೋರತೊಡಗಿದ.

ಆಟ ಮುಗಿದ ನಂತರ, ''ನೀವು ಹೇಗೆ ಗೆದ್ದಿರಿ?'' ಎಂದು ಕೇಳಿದಾಗ ಅಚ್ಚರಿಯ ಸಂಗತಿ ಹೊರಬಿತ್ತು. ಆಟ ಮೊದಲೇ ತನ್ನ ಪರವಾಗಿತ್ತು ಎಂಬ ಸತ್ಯ ತಿಳಿದಿದ್ದರೂ, ಆ ಗೆದ್ದ ಆಟಗಾರರಲ್ಲಿ ಯಾರೂ ತಮ್ಮ ಗೆಲುವಿಗೆ ಟಾಸ್ ಅಥವಾ ಪಕ್ಷಪಾತದ ನಿಯಮಗಳು ಕಾರಣವೆಂದು ಹೇಳಲಿಲ್ಲ! ಬದಲಿಗೆ, ''ನಾನು ಎಂಥ ಚಾಣಾಕ್ಷ ತಂತ್ರಗಳನ್ನು ಬಳಸಿದೆ, ಎಷ್ಟು ಜಾಣತನದಿಂದ ಆಸ್ತಿ ಖರೀದಿಸಿದೆ'' ಎಂದು ತಮ್ಮ ಸ್ವಂತ ಬುದ್ಧಿವಂತಿಕೆಯನ್ನೇ ಹಾಡಿಹೊಗಳಿಕೊಂಡರು.

ಅಂದರೆ ಕೇವಲ ಆಕಸ್ಮಿಕವಾಗಿ ಅಥವಾ ಸನ್ನಿವೇಶದ ಲಾಭದಿಂದ ಸಿಕ್ಕ ಸವಲತ್ತುಗಳೂ ಸಹ ಮನುಷ್ಯನಲ್ಲಿ ''ನಾನು ಯೋಗ್ಯ, ಹಾಗಾಗಿಯೇ ನನಗೆ ಇದು ಸಿಕ್ಕಿದೆ'' ಎಂಬ ಹುಸಿ ಅರ್ಹತಾ ಭಾವವನ್ನು ಹುಟ್ಟಿಸುತ್ತವೆ. ಸಂಪತ್ತು ಹೆಚ್ಚಿದಂತೆ, ಯಶಸ್ಸಿಗೆ ಕಾರಣವಾದ ಅದೃಷ್ಟ ಹಾಗೂ ಸಾಮಾಜಿಕ ಅನುಕೂಲಗಳನ್ನು ಮರೆತು ಜನರು ಅಹಂಕಾರ ಬೆಳೆಸಿಕೊಳ್ಳುತ್ತಾರೆ.

ವರ್ಗ ಆಧಾರಿತ ಇಂತಹ ಸ್ವಕೇಂದ್ರಿತ ಧೋರಣೆಗಳು ಬದಲಿಸಲಾಗದ ಗುಣಗಳೇನಲ್ಲ ಎಂಬುದನ್ನೂ ಪಿಫ್ ಸ್ಪಷ್ಟಪಡಿಸುತ್ತಾರೆ. ಶ್ರೀಮಂತ ವ್ಯಕ್ತಿಗಳಿಗೆ ಸಮಾನತೆಯ ಮಹತ್ವವನ್ನು ನೆನಪಿಸಿದಾಗ, ಇತರರ ಸಂಕಷ್ಟಗಳನ್ನು ಅವರದೇ ದೃಷ್ಟಿಕೋನದಿಂದ ನೋಡುವಂತೆ ಪ್ರೇರೇಪಿಸಿದಾಗ, ಅವರಲ್ಲಿನ ದರ್ಪ ಕಡಿಮೆಯಾಗಿ, ಸಹಾನುಭೂತಿ ಮತ್ತು ಸಾಮಾಜಿಕ ಕಾಳಜಿ ಮತ್ತೆ ಮರುಕಳಿಸುವುದು ಎನ್ನುವುದೂ ಕೂಡ ಅವರ ಅಧ್ಯಯನದಲ್ಲಿ ಕಂಡುಬಂದಿದೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR